ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 201

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಭಾನುವಾರ: 19-07-2026

## ಭಾರತದ ಖಾಸಗಿ ಬಾಹ್ಯಾಕಾಶ ಯುಗಕ್ಕೆ ಐತಿಹಾಸಿಕ ಮುನ್ನುಡಿ

## ಮೊದಲ ಪ್ರಯತ್ನದಲ್ಲೇ ವಿಕ್ರಮ್-1 ಯಶಸ್ವಿ ಉಡಾವಣೆ

**ಶ್ರೀಹರಿಕೋಟಾ (ಆಂಧ್ರಪ್ರದೇಶ), ಜು.18:** ಭಾರತದ ಬಾಹ್ಯಾಕಾಶ ಇತಿಹಾಸದಲ್ಲೇ ಅತ್ಯಂತ ಮಹತ್ವದ ಹಾಗೂ ಐತಿಹಾಸಿಕ ಕ್ಷಣವೊಂದು ದಾಖಲಾಗಿದೆ. ಹೈದರಾಬಾದ್ ಮೂಲದ ಖಾಸಗಿ ಬಾಹ್ಯಾಕಾಶ ಸಂಸ್ಥೆಯಾದ ಸ್ಕೈರೂಟ್ ಏರೋಸ್ಪೇಸ್ ಅಭಿವೃದ್ಧಿಪಡಿಸಿರುವ, ದೇಶದ ಮೊದಲ ಖಾಸಗಿ ಆರ್ಬಿಟಲ್ ದರ್ಜೆಯ ರಾಕೆಟ್ 'ವಿಕ್ರಮ್-1 ಶನಿವಾರ ಮಧ್ಯಾಹ್ನ ಇಲ್ಲಿನ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ಯಶಸ್ವಿಯಾಗಿ ಗಗನಕ್ಕೆ ಚಿಮ್ಮಿದೆ.



'ಆಗಮನ್' ಎಂದು ಹೆಸರಿಡಲಾದ ಈ ಐತಿಹಾಸಿಕ ಮಿಷನ್, ಜಾಗತಿಕ ವಾಣಿಜ್ಯ ಉಪಗ್ರಹ ಉಡಾವಣಾ ಮಾರುಕಟ್ಟೆಗೆ ಭಾರತೀಯ ಖಾಸಗಿ ವಲಯದ ಅಧಿಕೃತ ಪ್ರವೇಶವನ್ನು ಸಾರಿದೆ. ಇದರೊಂದಿಗೆ, ಜಾಗತಿಕವಾಗಿ ಕಕ್ಷೆಯ ರಾಕೆಟ್‌ಗಳನ್ನು ಯಶಸ್ವಿಯಾಗಿ ನಿರ್ಮಿಸಿ ಉಡಾವಣೆ ಮಾಡಿದ ಕೆಲವೇ ಕೆಲವು ಗಣ್ಯ ಕಂಪನಿಗಳ ಸಾಲಿಗೆ ಸ್ಕೈರೂಟ್ ಸೇರ್ಪಡೆಯಾಗಿದೆ.

**ಕೊನೆ ಕ್ಷಣದ ರೋಮಾಂಚನ ತಾಂತ್ರಿಕ ಸವಾಲು**

ನಿಗದಿತ ವೇಳಾಪಟ್ಟಿಯ ಪ್ರಕಾರ ರಾಕೆಟ್ ಶನಿವಾರ ಬೆಳಿಗ್ಗೆ 11:30 ಕ್ಕೆ ಉಡಾವಣೆಯಾಗಬೇಕಿತ್ತು. ಆದರೆ, ಉಡಾವಣೆಗೆ ಕೆಲವೇ ನಿಮಿಷಗಳ ಮುನ್ನ ಮಿಷನ್ ಕಂಟ್ರೋಲ್ ತಂಡವು ತಾಂತ್ರಿಕ ಕಾರಣಗಳಿಗಾಗಿ ಯೋಜಿತ ತಡೆ ವಿಧಿಸಿತು. ಇದರಿಂದಾಗಿ ಶ್ರೀಹರಿಕೋಟಾದ ಕಂಟ್ರೋಲ್ ರೂಂನಲ್ಲಿ ಕೆಲಕಾಲ ಆತಂಕ ಮತ್ತು ತಳಮಳದ ವಾತಾವರಣ ನಿರ್ಮಾಣವಾಗಿತ್ತು. ಕೊನೆಗೆ ಎಲ್ಲಾ ತಾಂತ್ರಿಕ ಸವಾಲುಗಳನ್ನು ಯಶಸ್ವಿಯಾಗಿ ನಿವಾರಿಸಿ, ಮಧ್ಯಾಹ್ನ 12:05:30 ರ ಸುಮಾರಿಗೆ ಮುಗಿಲನ್ನು ಸೀಳಿ ರಾಕೆಟ್ ನಭಕ್ಕೆ ಜಿಗಿಯುತ್ತಿದ್ದಂತೆ ವಿಜ್ಞಾನಿಗಳು ಮತ್ತು ಇಂಜಿನಿಯರ್‌ಗಳ ಹರ್ಷೋದ್ಗಾರ ಮುಗಿಲುಮುಟ್ಟಿತು.

ವಿಕ್ರಮ್-1 ರಾಕೆಟ್‌ನ ತಾಂತ್ರಿಕ ವೈಶಿಷ್ಟ್ಯಗಳು: ಏಳು ಅಂತಸ್ತಿನ ಎತ್ತರ: ಸಂಪೂರ್ಣವಾಗಿ ಕಾರ್ಬನ್ ಕಾಂಪೋಸಿಟ್ ಸಂರಚನೆಯಿಂದ ಮಾಡಲ್ಪಟ್ಟಿರುವ ಈ ರಾಕೆಟ್ ಸುಮಾರು 7 ಅಂತಸ್ತುಗಳಷ್ಟು ಎತ್ತರವಿದೆ.ಇದು ನಾಲ್ಕು ಹಂತಗಳ ರಾಕೆಟ್ ಆಗಿದ್ದು, ಮೂರು ಘನ ಇಂಧನ ಹಂತಗಳನ್ನು ಹೊಂದಿದೆ. ಕೊನೆಯ ಹಂತದಲ್ಲಿ ಕಕ್ಷೆ ಹೊಂದಾಣಿಕೆಗಾಗಿ ಸಂಸ್ಥೆಯೇ ಸ್ವತಂತ್ರವಾಗಿ ಅಭಿವೃದ್ಧಿಪಡಿಸಿದ ಆಧುನಿಕ 3ಆ-ಪ್ರಿಂಟೆಡ್ ದ್ರವ ಇಂಧನ ಎಂಜಿನ್ ಅನ್ನು ಬಳಸಲಾಗಿದೆ. ಭೂಮಿಯ ಕೆಳ ಕಕ್ಷೆಗೆ ಗರಿಷ್ಠ 350 ಕೆಜಿ ತೂಕದ ಸಣ್ಣ ಉಪಗ್ರಹಗಳನ್ನು ಹೊತ್ತೊಯ್ಯುವ ಸಾಮರ್ಥ್ಯವನ್ನು ಇದು ಹೊಂದಿದೆ. ಪ್ರಸ್ತುತ ಮೊದಲ ಪರೀಕ್ಷಾರ್ಥ ಹಾರಾಟದಲ್ಲಿ 60-ಡಿಗ್ರಿ ಇಳಿಜಾರಿನಲ್ಲಿ 450 ಕಿಲೋಮೀಟರ್ ಕಕ್ಷೆಯನ್ನು ಗುರಿಯಾಗಿಸಲಾಗಿದೆ.

ವಿಕ್ರಮ್-1 ರಾಕೆಟ್ ಕೇವಲ ತಾಂತ್ರಿಕ ಉಪಗ್ರಹಗಳನ್ನಷ್ಟೇ ಅಲ್ಲದೆ ವೈವಿಧ್ಯಮಯ ಪೇಲೋಡ್‌ಗಳನ್ನು ಹೊತ್ತೊಯ್ದಿದೆ ತಂತ್ರಜ್ಞಾನ ಪ್ರಾತ್ಯಕ್ಷಿಕೆಗಳು: ಗ್ರಾಹಾ ಸ್ಪೇಸ್ ಕಾಸ್ಮೋಸರ್ವ್, ಡಿ-ಕ್ಯೂಬ್ಡ್ ಮತ್ತು ಸ್ಕೈರೂಟ್ ಸಂಸ್ಥೆಯ ಸ್ವಂತ 'ಸ್ಕೋಪ್' ತಂತ್ರಜ್ಞಾನ ಪ್ರಾತ್ಯಕ್ಷಿಕೆ ಪೇಲೋಡ್‌ಗಳು. ಕಾಸ್ಮೋಸ್ ಡೈಮಂಡ್ಸ್ ಸಂಸ್ಥೆಯ "ಕಾಸ್ಮಿಕ್ ಬ್ಲೂಮ್" ಕಲಾಕೃತಿಯೊಂದಿಗೆ, ಭಾರತದ ಹೆಮ್ಮೆಯ ವಿಜ್ಞಾನಿಗಳಾದ ಸರ್ ಸಿ.ವಿ. ರಾಮನ್, ಡಾ. ವಿಕ್ರಮ್ ಸಾರಾಭಾಯ್ ಮತ್ತು ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರ ಸೂಕ್ಷ್ಮ ಕಲಾಕೃತಿಗಳನ್ನು ರಾಕೆಟ್‌ನಲ್ಲಿ ಇರಿಸಲಾಗಿದೆ.

ಈ ಮಹತ್ವದ ರಾಕೆಟ್ ನಿರ್ಮಾಣದಲ್ಲಿ ಶ್ರಮಿಸಿದ ಪ್ರತಿಯೊಬ್ಬ ಇಂಜಿನಿಯರ್, ತಂತ್ರಜ್ಞ ಹಾಗೂ ತಂಡದ ಸದಸ್ಯರ ಸಹಿಗಳನ್ನು ರಾಕೆಟ್‌ನ ಮೇಲೆ ಮುದ್ರಿಸುವ ಮೂಲಕ ಅವರಿಗೆ ವಿಶೇಷ ಗೌರವ ಸಲ್ಲಿಸಲಾಗಿದೆ.

**ಸ್ಕೈರೂಟ್‌ಗೆ ಮೋದಿ ಅಭಿನಂದನೆ:** ದೇಶದ ಮೊದಲ ಖಾಸಗಿ ನಿರ್ಮಿತ ಆರ್ಬಿಟಲ್ ಕ್ಲಾಸ್ ರಾಕೆಟ್ 'ವಿಕ್ರಮ್-1' ಯಶಸ್ವಿಯಾಗಿ ಉಡಾವಣೆಗೊಂಡ ಬೆನ್ನಲ್ಲೇ ಸ್ಕೈರೂಟ್ ಏರೋಸ್ಪೇಸ್ ಸಂಸ್ಥೆಯ ಸಂಸ್ಥಾಪಕರಾದ ಪವನ್ ಕುಮಾರ್ ಚಂದನಾ ಮತ್ತು ನಾಗ ಭರತ್ ಡಾಕಾ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಅವರು ದೂರವಾಣಿ ಕರೆ ಮಾಡಿ ವಿಶೇಷ ಅಭಿನಂದನೆ ಸಲ್ಲಿಸಿದ್ದಾರೆ.

ಈ ಯಶಸ್ವಿ ಉಡಾವಣೆಯ ನಂತರ ಸಂಸ್ಥಾಪಕರೊಂದಿಗೆ ಮಾತನಾಡಿದ ಪ್ರಧಾನಿ ಮೋದಿ, ಈ ಇತಿಹಾಸ ಪ್ರಸಿದ್ಧ ಕಾರ್ಯಾಚರಣೆಯನ್ನು ತಾವು ಅತ್ಯಂತ ಸೂಕ್ಷ್ಮವಾಗಿ ಗಮನಿಸುತ್ತಿದ್ದಾಗಿ ತಿಳಿಸಿದರು. "ಪವನ್ ಕುಮಾರ್ ಚಂದನಾ ಮತ್ತು ನಾಗ ಭರತ್ ಡಾಕಾ ಅವರೇ, ನೀವು ಕೇವಲ ಬಾಹ್ಯಾಕಾಶದಲ್ಲಿ ಒಂದು ಹೊಸ ಮರವನ್ನು ನೆಟ್ಟಿಲ್ಲ, ಬದಲಿಗೆ ಮುಂದಿನ ಯುವ ಪೀಳಿಗೆಗೆ ಪ್ರೇರಣೆ ನೀಡುವಂತಹ ಹೊಸ ಬೇರುಗಳನ್ನು ನಮ್ಮ ನೆಲದಲ್ಲಿ ಗಟ್ಟಿಗೊಳಿಸಿದ್ದೀರಿ" ಎಂದು ಪ್ರಧಾನಿ ಮೋದಿ ಗುಣಗಾನ ಮಾಡಿದ್ದಾರೆ.

"ದೇಶದ ಬಾಹ್ಯಾಕಾಶ ಮಹತ್ವಾಕಾಂಕ್ಷೆಯ ಈ ಸಾಧನೆ ಮತ್ತಷ್ಟು ಎತ್ತರಕ್ಕೆ ಕೊಂಡೊಯ್ದಿದೆ. ಇದು ಕೇವಲ

ಒಂದು ರಾಕೆಟ್ ಉಡಾವಣೆಯಲ್ಲ, ಭಾರತದ ಯುವ ನಾವೀನ್ಯಕಾರರ ಸಾಮರ್ಥ್ಯಕ್ಕೆ ಹಿಡಿದ ಕೈಗನ್ನಡಿ. ಎಂದು ಪ್ರಧಾನಿ ಎಕ್ಸ್‌ನಲ್ಲಿ ತಿಳಿಸಿದ್ದಾರೆ.

ಭಾರತದಲ್ಲಿ ಸಂಪೂರ್ಣವಾಗಿ ಖಾಸಗಿ ಸಂಸ್ಥೆಯೊಂದರಿಂದ ಅಭಿವೃದ್ಧಿಪಡಿಸಲಾದ ಮೊದಲ ಆರ್ಬಿಟಲ್ ಕ್ಲಾಸ್ ರಾಕೆಟ್ ಎಂಬ ಹೆಗ್ಗಳಿಕೆಗೆ ವಿಕ್ರಮ್-1 ಪಾತ್ರವಾಗಿದೆ.ಸಾಮಾನ್ಯವಾಗಿ ರಾಕೆಟ್ ಉಡಾವಣೆಗಳ ಮೊದಲ ಪ್ರಯೋಗಗಳಲ್ಲಿ ತಾಂತ್ರಿಕ ಸವಾಲುಗಳು ಎದುರಾಗುತ್ತವೆ. ಆದರೆ ಸ್ಕೈರೂಟ್ ಸಂಸ್ಥೆಯ ವಿಕ್ರಮ್-1 ಯಾವುದೇ ಅಡೆತಡೆಗಳಿಲ್ಲದೆ ಮೊದಲ ಬಾರಿಗೇ ಅತ್ಯಂತ ಯಶಸ್ವಿಯಾಗಿ ನಭಕ್ಕೆ ಜಿಗಿದಿದೆ.

ಇಸ್ರೋ ಬೆಂಬಲದೊಂದಿಗೆ ದೇಶದಲ್ಲಿ ಖಾಸಗಿ ಬಾಹ್ಯಾಕಾಶ ಉದ್ಯಮಕ್ಕೆ ಭವಿಷ್ಯದಲ್ಲಿ ಈ ಯಶಸ್ಸು ಹೊಸ ದಾರಿ ದೀಪವಾಗಲಿದೆ ಎಂದು ತಜ್ಞರು ವಿಶ್ಲೇಷಿಸಿದ್ದಾರೆ.

ಈ ಯಶಸ್ಸಿನಿಂದ ಭಾರತೀಯ ಬಾಹ್ಯಾಕಾಶ ತಂತ್ರಜ್ಞಾನ ವಲಯದಲ್ಲಿ ಹೊಸ ಸಂಚಲನ ಸೃಷ್ಟಿಯಾಗಿದ್ದು, ಜಾಗತಿಕ ವಾಣಿಜ್ಯ ಬಾಹ್ಯಾಕಾಶ ಮಾರುಕಟ್ಟೆಯಲ್ಲಿ ಭಾರತದ ಖಾಸಗಿ ಸಂಸ್ಥೆಗಳ ಮುನ್ನಡೆಗೆ ದಾರಿಯಾಗಿದೆ.

## ಖರ್ಗೆ ಜೊತೆ ಸಿಎಂ, ಡಿಸಿಎಂ ಮಹತ್ವದ ಚರ್ಚೆ



**ಬೆಂಗಳೂರು, ಜು. 18-** ರಾಜ್ಯ ಸಚಿವ ಸಂಪುಟ ವಿಸ್ತರಣೆ ಚರ್ಚೆಗಳು ಅಪೂರ್ಣವಾಗಿರುವಾಗಲೇ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಉಪಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್ ಇವರುಗಳು ಇಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಅವರನ್ನು ಭೇಟಿ ಮಾಡಿ, ಚರ್ಚೆ ನಡೆಸಿದರು.

ಎರಡು ದಿನಗಳ ಹಿಂದೆ ದೆಹಲಿಯಲ್ಲಿ ಸಂಪುಟ ವಿಸ್ತರಣೆ ಬಗ್ಗೆ ಚರ್ಚೆ ನಡೆಯುತ್ತಿದ್ದ ಸಂದರ್ಭದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಅವರ ಪುತ್ರನ ಅನಾರೋಗ್ಯದ ಕಾರಣ ಅವರು ಬೆಂಗಳೂರಿಗೆ ವಾಪಸ್ಸಾಗಿದ್ದರು. ಹಾಗಾಗಿ ಸಂಪುಟ ವಿಸ್ತರಣೆ ಚರ್ಚೆ ಅಪೂರ್ಣವಾಗಿತ್ತು.

ಕಾಂಗ್ರೆಸ್ ವರಿಷ್ಠ ರಾಹುಲ್‌ಗಾಂಧಿ ಅವರು ದೆಹಲಿಗೆ ಬಂದಿದ್ದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ಧರಾಜಾಮಯ್ಯ, ಕೆಪಿಸಿಸಿ ಅಧ್ಯಕ್ಷ ಹರಿಪ್ರಸಾದ್ ಅವರ ಜತೆ ಒಂದು ಸುತ್ತಿನ ಚರ್ಚೆ ನಡೆಸಿ ಖರ್ಗೆ ಅವರು ದೆಹಲಿಗೆ ಬಂದ ನಂತರ ಅವಶ್ಯಬಿದ್ದರೆ ನಿಮ್ಮನ್ನು ಕರೆಯುತ್ತೇನೆ ಎಂದು ಹೇಳಿದ್ದರು. ಈ ಬೆಳವಣಿಗೆ ಹಿನ್ನೆಲೆಯಲ್ಲಿ ಸಂಪುಟು ವಿಸ್ತರಣೆ ಮಹೂರ್ತ ಮುಂದಕ್ಕೆ ಹೋಗಿತ್ತು.

ಬೆಂಗಳೂರಿನಲ್ಲೇ ಇರುವ ಎಐಸಿಸಿ ಅಧ್ಯಕ್ಷ ಖರ್ಗೆ ಅವರನ್ನು ಅವರ ನಿವಾಸದಲ್ಲಿಂದು ಬೆಳಗ್ಗೆ ಮುಖ್ಯಮಂತ್ರಿ ಶಿವಕುಮಾರ್, ಉಪಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್ ಇವರುಗಳು ಭೇಟಿಯಾಗಿ ಸಂಪುಟ ವಿಸ್ತರಣೆ ಬಗ್ಗೆ ಚರ್ಚೆ ನಡೆಸಿದರು
ಕಾಂಗ್ರೆಸ್ ವರಿಷ್ಠ ರಾಹುಲ್‌ಗಾಂಧಿ ಅವರ ಜತೆ ಆದಷ್ಟು ಬೇಗ ಮಾತನಾಡಿ, ಸಂಪುಟ ವಿಸ್ತರಣೆಗೆ ಮಹೂರ್ತ ನಿಗದಿ ಮಾಡಿ ಎಂದು ಈ ಇಬ್ಬರೂ ನಾಯಕರು ಖರ್ಗೆಯವರಲ್ಲಿ ಮನವಿ ಮಾಡಿದರು.
ಖರ್ಗೆ ಅವರು ಭಾನುವಾರದ ನಂತರ ದೆಹಲಿಗೆ ತೆರಳಲಿದ್ದು ಸೋಮವಾರ ಇಲ್ಲವೆ ಮಂಗಳವಾರ ಸಂಪುಟ ವಿಸ್ತರಣೆ ಬಗ್ಗೆ ರಾಹುಲ್‌ಗಾಂದಿ ಅವರೊಂದಿಗೆ ಚರ್ಚಿಸುವ ಸಾಧ್ಯತೆಗಳಿವೆ.

# ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ದೀರ್ಘಕಾಲದ ಸಹಭಾಗಿತ್ವ ಅಗತ್ಯ: ಲೋಕಸಭಾ ಸದಸ್ಯ ಜಿ.ಕುಮಾರ ನಾಯಕ









ಧೈರ್ಯದ ದಾರಿ

**ರಾಯಚೂರು ಜುಲೈ 18:** ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಕಾರ್ಪೋರೇಟ್ ಸಾಮಾಜಿಕ ಹೊಣೆಗಾರಿಕೆ ನಿಧಿ ಮಾತ್ರವಲ್ಲದೆ. ವಿವಿಧ ಕಂಪನಿಗಳ ಪರಿಣತಿ, ಅನುಭವ, ತಾಂತ್ರಿಕ ಜ್ಞಾನ ಹಾಗೂ ಸಮಾಜದೊಂದಿಗೆ ದೀರ್ಘಕಾಲದ ಸಹಭಾಗಿತ್ವವೂ ಅಗತ್ಯವಾಗಿದೆ ಎಂದು ರಾಯಚೂರು ಲೋಕಸಭಾ ಕ್ಷೇತ್ರದ ಸದಸ್ಯರಾದ ಜಿ.ಕುಮಾರ್ ನಾಯಕ ಅವರು ಹೇಳಿದರು.
ಜುಲೈ 18ರ ಶನಿವಾರ ದಂದು ನಗರದ ಬಿಜನಗೇರಾ ರಸ್ತೆಯ ನವೋದಯ ತಾಂತ್ರಿಕ ಕಾಲೇಜಿನ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ರಾಯಚೂರು ಮಹಾನಗರ ಪಾಲಿಕೆಯ ವತಿಯಿಂದ ರಾಯಚೂರು ಇಂಪ್ಯಾಕ್ಟ್ ಸಮ್ಮಿಟ್-2026ರ ಜಿಲ್ಲಾ ಮಟ್ಟದ ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ (ಸಿಎಸ್‌ಆರ್) ಸಮಾವೇಶ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.
ಈ ಹಿಂದೆ ರಾಯಚೂರಿನ ಜಿಲ್ಲಾಧಿಕಾರಿಯಾಗಿ ಕಾರ್ಯನಿರ್ವಹಿಸಿದ್ದ ದಿನಗಳನ್ನು ಸ್ಮರಿಸಿದ ಅವರು, ಈ ಹಿಂದೆ ಅಭಿವೃದ್ಧಿ ಕಾರ್ಯಗಳಿಗೆ ಸರ್ಕಾರದ ಬಳಿ ಸಾಕಷ್ಟು ಹಣದ ಕೊರತೆ ಇತ್ತು. ಆದರೆ ಈಗ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಲಕ್ಷಾಂತರ ಕೋಟಿ ರೂಪಾಯಿಗಳ ಬಜೆಟ್ ಹೊಂದಿದ್ದರೂ ಅಭಿವೃದ್ಧಿಯ ಎಲ್ಲ ಅಗತ್ಯಗಳನ್ನು ಪೂರೈಸಲು ಅದು ಸಾಕಾಗುತ್ತಿಲ್ಲ. ಆದ್ದರಿಂದ ಸರ್ಕಾರದ ಜೊತೆಗೆ ಖಾಸಗಿ ಸಂಸ್ಥೆಗಳ ಸಹಭಾಗಿತ್ವ ಅತ್ಯಗತ್ಯವಾಗಿದೆ ಎಂದರು.

ಕಂಪನಿಗಳು ತಮ್ಮ ಲಾಭದ ಒಂದು ಭಾಗವನ್ನು ಸಮಾಜದ ಅಭಿವೃದ್ಧಿಗೆ ಬಳಸುವ ಉದ್ದೇಶದಿಂದ ಸಿಎಸ್‌ಆರ್ ಅನುದಾನದ ವ್ಯವಸ್ಥೆ ಜಾರಿಗೆ ಬಂದಿದೆ. ಆದರೆ ರಾಯಚೂರಿಗೆ ಕೇವಲ ಹಣ ನೀಡಿದರೆ. ಸಾಕಾಗುವುದಿಲ್ಲ. ಕಂಪನಿಗಳ ಪ್ರತಿನಿಧಿಗಳು ಜಿಲ್ಲೆಗೆ ಬಂದು ಇಲ್ಲಿನ ಜನರು, ಅಧಿಕಾರಿಗಳು ಹಾಗೂ ಸ್ಥಳೀಯ ಪರಿಸ್ಥಿತಿಯನ್ನು ಅರ್ಥಮಾಡಿಕೊಂಡು, ತಮ್ಮ ಪರಿಣತಿಯ ಆಧಾರದ ಮೇಲೆ ಜಿಲ್ಲೆಯ ಅಭಿವೃದ್ಧಿಗೆ ಒತ್ತು ನೀಡಬೇಕು ಎಂದು ಲೋಕಸಭಾ ಸದಸ್ಯರು ಕರೆ ನೀಡಿದರು.
ರಾಜ್ಯದ ವಿವಿಧ ಜಿಲ್ಲೆಗಳು ಮತ್ತು ದೇಶದ ಇತರೆ ಭಾಗಗಳಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಂಡಿರುವ ಅಭಿವೃದ್ಧಿ ಮಾದರಿಗಳು, ಸಹಕಾರ ಸಂಘಗಳು, ಹೈನುಗಾರಿಕೆ, ಶಿಕ್ಷಣ ಹಾಗೂ ಆರೋಗ್ಯ ಕ್ಷೇತ್ರದ ಉತ್ತಮ ಅನುಭವಗಳನ್ನು ರಾಯಚೂರಿಗೂ ತರಬೇಕು. ಈ ಅನುಭವ ಹಂಚಿಕೆಯಿಂದ ಜಿಲ್ಲೆಯ ಅಭಿವೃದ್ಧಿಗೆ ಹೊಸ ದಿಕ್ಕು ದೊರೆಯಲಿದೆ ಎಂದರು.
ಶಾಲೆಗಳಲ್ಲಿ ಕಟ್ಟಡ, ತರಗತಿ ಕೊಠಡಿ ಅಥವಾ ಶೌಚಾಲಯ ನಿರ್ಮಾಣದಂತಹ ಕಾಮಗಾರಿಗಳಿಗೆ ಮಾತ್ರ ಸೀಮಿತವಾಗದೆ. ಶಿಕ್ಷಣದ ಗುಣಮಟ್ಟ, ವಿದ್ಯಾರ್ಥಿಗಳ ಪ್ರೇರಣೆ, ಕೌಶಲ್ಯಾಭಿವೃದ್ಧಿ, ಆರೋಗ್ಯ ಹಾಗೂ ಜನರಿಗೆ ಪೂರಕವಾದ ಯೋಜನೆಗಳಿಗೂ ಆದ್ಯತೆ ನೀಡಬೇಕು. ಸರ್ಕಾರದ ಯೋಜನೆಗಳಲ್ಲಿ ಇರುವ ಕೊರತೆಗಳನ್ನು ಗುರುತಿಸಿ ಅವುಗಳನ್ನು ಸಿಎಸ್‌ಆರ್ ಮೂಲಕ ತುಂಬುವ ಕೆಲಸವಾಗಬೇಕು ಎಂದರು.
ನಮಗೆ ನಿಮ್ಮ ಹಣ ಮಾತ್ರ ಬೇಕಿಲ್ಲ. ನಿಮ್ಮ ಕೌಶಲ್ಯ, ಅನುಭವ, ಸಹಾನುಭೂತಿ ಹಾಗೂ ಸಮಾಜಮುಖಿ ಮನೋಭಾವವೂ ಬೇಕಿದೆ. ಕಂಪನಿಗಳು ರಾಯಚೂರಿನೊಂದಿಗೆ ದೀರ್ಘಕಾಲದ ಪಾಲುದಾರಿಕೆಯನ್ನು ಬೆಳೆಸಿದರೆ ಅದರ ಲಾಭ ಮುಂದಿನ ಪೀಳಿಗೆಗೂ ಸಿಗಲಿದೆ ಎಂದು ಹೇಳಿದರು.
ಈ ವೇಳೆ ಜಿಲ್ಲಾಧಿಕಾರಿ ಪೂವಿತಾ.ಎಸ್ ಅವರು ಮಾತನಾಡಿ, ರಾಯಚೂರು ಜಿಲ್ಲೆಯನ್ನು ಮಹಾತ್ವಾಕಾಂಕ್ಷೆ ಜಿಲ್ಲೆಯೆಂದು ಗುರುತಿಸಲ್ಪಟ್ಟಿದೆ. ಪ್ರೊ.ಎಂ.ಗೋವಿಂದ ರಾವ್ ಸಮಿತಿ ತನ್ನ ಸಮಗ್ರ ಸಂಯೋಜಿತ ಅಭಿವೃದ್ಧಿ ಸೂಚ್ಯಂಕ ಆಧಾರದ ವರದಿಯಲ್ಲಿ ರಾಯಚೂರು ಜಿಲ್ಲೆಯನ್ನು ಮಾನವ ಅಭಿವೃದ್ಧಿಯ ವಿವಿಧ ಸೂಚ್ಯಂಕಗಳಲ್ಲಿ ನಿರಂತರ ಹಿನ್ನಡೆ ಹೊಂದಿರುವ ಜಿಲ್ಲೆ ಎಂದು ಗುರುತಿಸಿದೆ. ಇದಕ್ಕೂ ಮುನ್ನ ಡಾ.ಡಿ.ಎಂ.ನಂಜುಂಡಪ್ಪ ಉನ್ನತಾಧಿಕಾರ ಸಮಿತಿ ಸಹ ಸಮಗ್ರ ಸಾಮಾಜಿಕ-ಆರ್ಥಿಕ ಹಾಗೂ ಮೂಲಸೌಕರ್ಯ ಸೂಚ್ಯಂಕಗಳ ಆಧಾರದ ಮೇಲೆ ರಾಯಚೂರು ಜಿಲ್ಲೆಯನ್ನು ಕರ್ನಾಟಕದ ಅತ್ಯಂತ 2ನೇಪುಟಕ್ಕೆ

ಮೊದಲನೇ ಪುಟದಿಂದ

## ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ದೀರ್ಘಕಾಲದ ಸಹಭಾಗಿತ್ವ ಅಗತ್ಯ: ಲೋಕಸಭಾ ಸದಸ್ಯ ಜಿ.ಕುಮಾರ ನಾಯಕ

ಹಿಂದುಳಿದ ಜಿಲ್ಲೆಗಳಲ್ಲಿ ಒಂದಾಗಿ ವರ್ಗೀಕರಿಸಿತ್ತು. ಜಿಲ್ಲೆಯಲ್ಲಿ ಸಾಕಷ್ಟು ಸೌಲಭ್ಯಗಳಿದ್ದು, ಸಿಎಸ್ಆರ್ ನಿಧಿಯ ಅಗತ್ಯತೆ ತುಂಬಾ ಇದೆ ಎಂದರು.

ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಮಾತನಾಡಿ, ರಾಯಚೂರು ಜಿಲ್ಲೆಯಲ್ಲಿ ಆರೋಗ್ಯ, ಶಿಕ್ಷಣ, ಪೌಷ್ಟಿಕತೆ, ಜೀವನೋಪಾಯ, ಜಲ ಸಂರಕ್ಷಣೆ ಹಾಗೂ ಕೌಶಲಾಭಿವೃದ್ಧಿ ಕ್ಷೇತ್ರಗಳಲ್ಲಿ ಸಾಕಷ್ಟು ಅವಕಾಶಗಳು ಮತ್ತು ಸವಾಲುಗಳಿವೆ. ನಾಗರಿಕ ಸಮಾಜ ಹಾಗೂ ಸಮುದಾಯಗಳ ಸಹಭಾಗಿತ್ವದಿಂದಲೇ ಶೀಘ್ರ ಪರಿವರ್ತನೆ ಸಾಧ್ಯವಾಗುತ್ತದೆ. ಸಿಎಸ್ಆರ್ ಸಂಸ್ಥೆಗಳ ಆದ್ಯತೆ ಮತ್ತು ಜಿಲ್ಲೆಯ ಅಗತ್ಯಗಳನ್ನು ಒಂದೇ ವೇದಿಕೆಯಲ್ಲಿ ಜೋಡಿಸಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಅಗತ್ಯ ಸಹಕಾರ ನೀಡಲಾಗುವುದು ಎಂದರು.

ಈ ವೇಳೆ ರಾಯಚೂರು ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮಹೋಪಾತ್ರ ಅವರು ಮಾತನಾಡಿ, ದೇಶದಲ್ಲಿ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ (ಸಿಎಸ್ಆರ್) ನಿಧಿಯ ಶೇ.75ರಷ್ಟು ಕೈಗಾರಿಕಾ ಅಭಿವೃದ್ಧಿ ಹೊಂದಿದ ಜಿಲ್ಲೆಗಳಲ್ಲೇ ಖರ್ಚಾಗುತ್ತಿದೆ. ಆದರೆ ರಾಯಚೂರಿನಂತಹ ಹಿಂದುಳಿದ ಜಿಲ್ಲೆಗಳಲ್ಲಿ ಹೂಡಿಕೆ ಮಾಡಿದರೆ ಅದರ ಸಾಮಾಜಿಕ ಪರಿಣಾಮ (ಸಿಎಸ್ಆರ್) ಐದು ಪಟ್ಟು ಹೆಚ್ಚಾಗುತ್ತದೆ ಎಂದು ಹೇಳಿದರು.

ರಾಯಚೂರು ಮಹಾನಗರದಲ್ಲಿ 35 ಕೊಳಚೆ ಪ್ರದೇಶಗಳಿದ್ದು, ಅಲ್ಲಿನ ಜನರು ಬಹುಪೀಳಿಗೆಯ ಬಡತನ, ಮೂಲ ಸೌಕರ್ಯಗಳ ಕೊರತೆ ಹಾಗೂ ಪರಿಸರ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಸ್ಮಾರ್ಟ್ ತರಗತಿ ಕೊಠಡಿಗಳು, ಕೆರೆಗಳ ಪುನರುಜ್ಜೀವನ, ಸ್ವಚ್ಛ ಪರಿಸರ ನಿರ್ಮಾಣ ಸೇರಿದಂತೆ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಸಿಎಸ್ಆರ್ ಸಂಸ್ಥೆಗಳು ಕೈಜೋಡಿಸುವಂತೆ ಅವರು ಹೇಳಿದರು.

ಕಿರು ವಿಡಿಯೋ ಪ್ರದರ್ಶನ: ಇದಕ್ಕೂ ಮುಂಚೆ ವಿವಿಧ ಕಂಪನಿಯ ಪ್ರತಿನಿಧಿಗಳಿಗೆ ಜಿಲ್ಲೆಯ ಮಾಹಿತಿ ನೀಡುವ ಹಿನ್ನಲೆಯಲ್ಲಿ ರಾಯಚೂರು ಜಿಲ್ಲೆಯ ಇತಿಹಾಸ ಮತ್ತು ಐತಿಹಾಸಿಕ ಹಾಗೂ ಜಿಲ್ಲೆಯ ವಿವಿಧ ಕ್ಷೇತ್ರದ ಅಭಿವೃದ್ಧಿಯ ಕುರಿತು ಕಿರು ವಿಡಿಯೋವನ್ನು ಪ್ರದರ್ಶನ ಮಾಡಲಾಯಿತು.

ವಿವಿಧ ಗಣ್ಯರಿಂದ ಪ್ರಶಂಸಾ ಪತ್ರ ವಿತರಣೆ: ರಾಯಚೂರು ಇಂಪ್ಯಾಕ್ಟ್ ಸಮ್ಮಿಟ್–2026ರ ಅಂಗವಾಗಿ ಕಾರ್ಪೊರೇಟ್ ಸಂಸ್ಥೆಗಳು ಮತ್ತು ಅಭಿವೃದ್ಧಿ ಪಾಲುದಾರರಿಗೆ ಪ್ರಶಂಸಾ ಪತ್ರವನ್ನು ವಿವಿಧ ಗಣ್ಯರಿಂದ ನೀಡಲಾಯಿತು.

ಇದೇ ಸಂದರ್ಭದಲ್ಲಿ ಮಾನ್ವಿ ವಿಧಾನ ಸಭಾ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ನವೋದಯ ಶಿಕ್ಷಣ ಸಂಸ್ಥೆಯ ರಿಜಿಸ್ಟ್ರಾರ್ ಡಾ.ಶ್ರೀನಿವಾಸ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು, ವಿವಿಧ ಕಂಪನಿಗಳ ಪ್ರತಿನಿಧಿಗಳು ಇದ್ದರು.

## ನೆರೆ ರಾಜ್ಯದಲ್ಲಿ ಋತುಮಾನದ ಫ್ಲೂ ವರದಿ ಹಿನ್ನಲೆಯಲ್ಲಿ ರಾಯಚೂರಿನ ಗಡಿಭಾಗದಲ್ಲಿ ಅಗತ್ಯ ಮುಂಜಾಗ್ರತಾ ಕ್ರಮ: ಡಿಹೆಚ್ಓ ಡಾ.ನಂದಿತಾ ಎಮ್.ಎನ್.

ಧೈರ್ಯದ ದಾರಿ



**ರಾಯಚೂರು ಜುಲೈ 18:** ರಾಯಚೂರು ಜಿಲ್ಲೆಯ ನೆರೆಯ ಆಂಧ್ರಪ್ರದೇಶ ರಾಜ್ಯದ ಕೆಲವು ಭಾಗಗಳಲ್ಲಿ ಋತುಮಾನದ ಫ್ಲೂ (ಕೋವಿಡ್ ಮಾದರಿ ಲಕ್ಷಣ) ಪ್ರಕರಣಗಳು ವರದಿಯಾಗಿರುವ ಹಿನ್ನಲೆ ಭಾರತ ಸರ್ಕಾರದ ಮಾರ್ಗಸೂಚಿ ಹಾಗೂ ಕರ್ನಾಟಕ ಸರ್ಕಾರದ ಸೂಚನೆಯಂತೆ ರಾಯಚೂರು ಜಿಲ್ಲೆಯ ಆಂಧ್ರ ಗಡಿಭಾಗದಲ್ಲಿ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ನಂದಿತಾ ಎಮ್.ಎನ್. ಅವರು ತಿಳಿಸಿದ್ದಾರೆ.

ಗಡಿ ಭಾಗದ ಪ್ರಾಥಮಿಕ ಆರೋಗ್ಯ ಕೇಂದ್ರಗಳಾದ ಗಿಲ್ಲೆಸೂಗುರು, ಗಾಣದಾಳ, ಇಡಪನೂರು, ಯಾಪಲದಿನ್ನಿ, ಚಂದ್ರಬಂಡಾಗಳಲ್ಲಿ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿಯರಿಗೆ ಈಗಾಗಲೇ ಸಾರಿ ಮತ್ತು ಐಎಲ್ಐ ರೋಗ ಲಕ್ಷಣಗಳು ಇರುವವರನ್ನು ಗುರ್ತಿಸಿ ಪರೀಕ್ಷಿಸಲು ಅಗತ್ಯ ಕ್ರಮ ವಹಿಸಲಾಗಿದೆ. ರಾಯಚೂರಿನ ಗಡಿ ಭಾಗದ ಹಾಗೂ ಜಿಲ್ಲೆಯ ವಿವಿಧ ತಾಲೂಕಿನ ಸಾರ್ವಜನಿಕರರು ಗಾಬರಿಯಾಗಬಾರದು ಎಂದರು.

ಜಿಲ್ಲೆಯಲ್ಲಿ ಪ್ರಸ್ತುತ ಇಲ್ಲಿಯವರೆಗೂ ರೋಗ ಲಕ್ಷಣದ ಕುರಿತು ಯಾವುದೇ ಪ್ರಕರಣಗಳು ವರದಿಯಾಗಿರುವುದಿಲ್ಲ. ಹೊರ ಜಿಲ್ಲೆಯ ಪ್ರವಾಸಿಗರೂ ಭೇಟಿ ನೀಡುವ ಸ್ಥಳಗಳಲ್ಲಿ ಸೂಕ್ತ ಕ್ರಮ ವಹಿಸಲಾಗುತ್ತದೆ. ಯಾರಿಗಾದರೂ ಜ್ವರ, ಕೆಮ್ಮು, ಗಂಟಲು ಉರಿ/ ನೋವು, ಮೈ–ಕೈ ನೋವು, ಉಸಿರಾಟದ ತೊಂದರೆ ಕಂಡು ಬಂದಲ್ಲಿ ತಕ್ಷಣವೇ ವೈದ್ಯರ ಬಳಿ ಪರೀಕ್ಷಿಸಿ ಕೊಳ್ಳಬೇಕು ಎಂದರು. ಋತುಮಾನದ ಫ್ಲೂ ಹರಡದಂತೆ ಸಾರ್ವಜನಿಕರು, ನಿಯಂತ್ರಣ ಕ್ರಮಗಳಾದ ಕೆಮ್ಮುವಾಗ ಅಥವಾ ಸೀನುವಾಗ ಬಾಯಿ ಮತ್ತು ಮೂಗನ್ನು ಮುಚ್ಚಿಕೊಳ್ಳುವುದು. ಕೈಗಳನ್ನು ಸಾಬೂನು ಮತ್ತು ನೀರಿನಿಂದ ಆಗಾಗ ತೊಳೆಯಬೇಕು. ಶುದ್ಧ ಕುಡಿಯುವ ನೀರು ಹಾಗೂ ಆರೋಗ್ಯಕರ ಆಹಾರ ಸೇವಿಸಬೇಕು.

ಜಿಲ್ಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಪ್ರಕರಣಗಳು ವರದಿಯಾದಲ್ಲಿ ಐಸೊಲೇಷನ್ ವಾರ್ಡ್ ಹಾಗೂ ಜಿಲ್ಲಾಡಳಿತದ ನೇತೃತ್ವದಲ್ಲಿ ಚೆಕ್ ಪೋಸ್ಟ್ ನಿರ್ಮಿಸಲು ಅಗತ್ಯ ಸಿದ್ದತೆ ಮಾಡಲಾಗುತ್ತಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎರಡು ದಿನಗಳ ತರಬೇತಿ ಕಾರ್ಯಗಾರ ಯಶಸ್ವಿ



ಧೈರ್ಯದ ದಾರಿ

**ರಾಯಚೂರು ಜುಲೈ 18 :** ರಾಯಚೂರು ಜಿಲ್ಲಾ ತರಬೇತಿ ಸಂಸ್ಥೆಯಲ್ಲಿ ಜಿಲ್ಲೆಯ ಸರ್ಕಾರಿ ಸಿ ವೃಂದದ ನೌಕರರು ಮತ್ತು ಅಧಿಕಾರಿಗಳಿಗೆ ಜುಲೈ 17 ಹಾಗೂ 18ವರೆಗೆ ಎರಡು ದಿನಗಳ ಸುಸ್ಥಿರ ಅಭಿವೃದ್ಧಿ ಗುರಿಗಳ ಕುರಿತು ಪರಿಚಯಾತ್ಮಕ ತರಬೇತಿ ಕಾರ್ಯಗಾರವನ್ನು ಯಶಸ್ವಿ ನಡೆಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಂಶುಪಾಲರು ಶ್ರೀನಿವಾಸ್ ಎಸ್ ಅವರು ವಹಿಸಿದ್ದರು.

ಸಂಸ್ಥೆಯ ಉಪ ಪ್ರಾಂಶುಪಾಲರು, ಬೋಧಕರುಗಳು, ಕಚೇರಿಯ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ತರಬೇತಿ ಕಾರ್ಯಗಾರದಲ್ಲಿ ಭಾಗವಹಿಸಿದ್ದರು.

ಮುಖ್ಯ ಅತಿಥಿಗಳು ಹಾಗೂ ತರಬೇತಿಯ ಸಂಯೋಜಕರಾಗಿ ಡಾ.ಸಿದ್ದರಾಮ. ಹೆಚ್ ಎಮ್, ಸುಸ್ಥಿರ ಅಭಿವೃದ್ಧಿ ಗುರಿಗಳು ಕರ್ನಾಟಕ ಕೇಂದ್ರ, ಆಡಳಿತ ತರಬೇತಿ ಸಂಸ್ಥೆ ಮೈಸೂರಿನಿಂದ ಆಗಮಿಸಿ ಸುಸ್ಥಿರ ಅಭಿವೃದ್ಧಿ ಗುರಿಗಳಿಗೆ ಸಂಬಂಧಿಸಿದಂತೆ ವಿಶೇಷ ಉಪನ್ಯಾಸ ನೀಡಿದರು.

ಜಿಲ್ಲಾ ಪಂಚಾಯತ್ ರಾಯಚೂರು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ವ್ಯಾಪ್ತಿಯ 20 ವಿವಿಧ ಇಲಾಖೆಗಳ ಸಿ ವೃಂದದ ನೌಕರರು ಮತ್ತು ಅಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳು ರಾಯಚೂರು ಇವರ ವ್ಯಾಪ್ತಿಗೆ ಬರುವ ವಿವಿಧ ಇಲಾಖೆಗಳ 10 ಜನ ಸಿ–ವೃಂದದ ನೌಕರರು ಮತ್ತು ಸಿಬ್ಬಂದಿಗಳಿಗೆ ತರಬೇತಿಯಲ್ಲಿ ಭಾಗವಹಿಸುವ ಮೂಲಕ ಸುಸ್ಥಿರ ಅಭಿವೃದ್ಧಿ ಗುರಿಗಳ ಪರಿಚಯಾತ್ಮಕ ತರಬೇತಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ಯು.ಪಿ.ಎಸ್.ಸಿ ಪರೀಕ್ಷಾ ಪೂರ್ವ ತರಬೇತಿಗೆ ಅರ್ಜಿ ಆಹ್ವಾನ

**ರಾಯಚೂರು ಜುಲೈ 18:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ 2026–27ನೇ ಸಾಲಿನಲ್ಲಿ ಯು.ಪಿ.ಎಸ್.ಸಿ ನಾಗರೀಕ ಸೇವಾ ಪರೀಕ್ಷಾ ಪೂರ್ವ ತರಬೇತಿಯನ್ನು ಊಟ ಹಾಗೂ ವಸತಿಯೊಂದಿಗೆ ನೀಡಲು ಜಿಲ್ಲೆಯ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲೆಯ ಹಿಂದುಳಿದ ವರ್ಗಗಳಾದ ಪ್ರವರ್ಗ–1, 2(ಎ), 3(ಎ), ಹಾಗೂ 3(ಬಿ)ಗಳಿಗೆ ಸೇರಿದ ಅಭ್ಯರ್ಥಿಗಳು ಆಗಸ್ಟ್ 03ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ವೆಬ್ಸೈಟ್ ವಿಳಾಸ: https://bcwd.karnataka.gov.in ಅಥವಾ ಜತಭಿಟಿಜುಣಾಜಡಿತುಥಿಞ.ಇಚಿಡಿಟಿಚಿಣಚಿಞಚಿ.ರಠತ.ಟಿ. ಅಥವಾ ಸಹಾಯವಾಣಿ: 8050770004ಗೆ ಕಚೇರಿಯ ಸಮಯದಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಿಕ್ಷಕರ ಕೈಗೆ ಹೊಣೆಗಾರಿಕೆ ಇದೆ; ಸಮಾಜದ ಬೆಂಬಲ ಎಲ್ಲಿದೆ?




ಶಿಕ್ಷಕರ ಕೈಗೆ ಅಧಿಕಾರಕ್ಕಿಂತ ಹೆಚ್ಚು ಹೊಣೆಗಾರಿಕೆ ಇದೆ; ಆದರೆ ಹೊಣೆಗಾರಿಕೆಗೆ ಅಗತ್ಯವಾದ ಬೆಂಬಲವೂ ಸಮಾಜದಿಂದ ಸಿಗಬೇಕು. ಒಬ್ಬ ನಿಜವಾದ ಶಿಕ್ಷಕನಿಗೆ ತನ್ನ ವಿದ್ಯಾರ್ಥಿಗಳು ಕೇವಲ ವಿದ್ಯಾರ್ಥಿಗಳಲ್ಲ; ಅವರು ತನ್ನ ಮಕ್ಕಳಂತೆಯೇ. ಅವರ ಭವಿಷ್ಯ ಉತ್ತಮವಾಗಲಿ ಎಂಬ ಉದ್ದೇಶದಿಂದಲೇ ತಪ್ಪುಗಳನ್ನು ತಿದ್ದಲು, ಒಳ್ಳೆಯ ದಾರಿಗೆ ನಡೆಸಲು ಪ್ರಯತ್ನಿಸುತ್ತಾರೆ.

ಆದರೆ ಇತ್ತೀಚಿನ ದಿನಗಳಲ್ಲಿ ಶಿಕ್ಷಕರ ಪ್ರತಿಯೊಂದು ಕ್ರಮವೂ ಅನುಮಾನದಿಂದ ನೋಡಲ್ಪಡುವ ಪರಿಸ್ಥಿತಿ ನಿರ್ಮಾಣವಾಗಿದೆ. ತಪ್ಪು ಮಾಡಿದ ವಿದ್ಯಾರ್ಥಿಯನ್ನು ತಿದ್ದಿದರೂ ಪ್ರಶ್ನೆ, ತಿದ್ದದಿದ್ದರೂ ಪ್ರಶ್ನೆ. ಇಂತಹ ಸಂದರ್ಭಗಳಲ್ಲಿ ಅನೇಕ ಶಿಕ್ಷಕರು ಮಾನಸಿಕ ಒತ್ತಡ ಅನುಭವಿಸುತ್ತಿದ್ದಾರೆ.

ಇದರ ಅರ್ಥ ದೈಹಿಕ ಶಿಕ್ಷೆಯನ್ನು ಸಮರ್ಥಿಸುವುದಲ್ಲ. ಯಾವುದೇ ಮಗುವಿನ ಗೌರವ ಮತ್ತು ಸುರಕ್ಷತೆ ಮುಖ್ಯವೇ ಸರಿ. ಅದೇ ಸಮಯದಲ್ಲಿ, ಶಾಲೆಯಲ್ಲಿ ಶಿಸ್ತು ಕಾಪಾಡಲು ಶಿಕ್ಷಕರಿಗೆ ನ್ಯಾಯಸಮ್ಮತವಾದ ಬೆಂಬಲ, ಸ್ಪಷ್ಟ ನಿಯಮಗಳು ಹಾಗೂ ಪೋಷಕರ ಸಹಕಾರವೂ ಅಷ್ಟೇ ಅಗತ್ಯ. ಉತ್ತಮ ಶಿಕ್ಷಣವೆಂದರೆ ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಪೋಷಕರು ಪರಸ್ಪರ ಗೌರವ, ವಿಶ್ವಾಸ ಮತ್ತು ಸಹಕಾರದಿಂದ ಮುಂದೆ ಸಾಗುವಾಗ ಮಾತ್ರ ಸಾಧ್ಯ. ಶಿಕ್ಷಕರನ್ನು ಶತ್ರುಗಳಾಗಿ ಅಲ್ಲ, ಮಕ್ಕಳ ಭವಿಷ್ಯವನ್ನು ರೂಪಿಸುವ ಸಹಯಾತ್ರಿಗಳಾಗಿ ನೋಡೋಣ. ಶಿಕ್ಷಕರನ್ನು ಗೌರವಿಸೋಣ. ಮಕ್ಕಳನ್ನು ಪ್ರೀತಿಯಿಂದ ಬೆಳೆಸೋಣ. ನ್ಯಾಯ ಮತ್ತು ಮಾನವೀಯತೆ ಎರಡನ್ನೂ ಸಮತೋಲನದಿಂದ ಕಾಪಾಡೋಣ.

## ಜಿಲ್ಲಾ ಪ್ರಗತಿ ಪರಿಶೀಲನಾ ಸಭೆ:ಬರ ಪರಿಸ್ಥಿತಿ ಸಮರ್ಥವಾಗಿ ಎದುರಿಸಲು ಸಜ್ಜಾಗಿ:ಸುಬೋಧ ಯಾದವ



**ಕಲಬುರಗಿ,ಜು,18:** ಪ್ರಸಕ್ತ ವರ್ಷದಲ್ಲಿ ಇದೂವರೆಗೆ ಮುಂಗಾರು ಮಳೆ ಕೈಕೊಟ್ಟಿದ್ದರಿಂದ ಮುಂದಿನ ದಿನದಲ್ಲಿ ಬರದ ಛಾಯೆ ಆವರಿಸುವ ಸಾಧ್ಯತೆ ಇದ್ದು, ಅದನ್ನು ಸಮರ್ಥವಾಗಿ ಎದುರಿಸಲು ಅಧಿಕಾರಿಗಳು ಸಜ್ಜಾಗಬೇಕೆಂದು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸುಬೋಧ ಯಾದವ ತಿಳಿಸಿದರು.

ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಇಂತಹ ಬರ ಪರಿಸ್ಥಿತಿಯಲ್ಲಿ ಜನ ಮತ್ತು ಜಾನುವಾರುಗಳಿಗೆ ಕುಡಿಯುವ ನೀರು ಪೂರೈಕೆ ನಮ್ಮೆಲ್ಲರ ಮೊದಲ ಆದ್ಯತೆಯಾಗಬೇಕು. ಜಾನುವಾರುಗಳಿಗೆ ಅಗತ್ಯ ಪ್ರಮಾಣದಲ್ಲಿ ಮೇವು ದಾಸ್ತಾನು ಮಾಡಿಟ್ಟುಕೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಬಿದ್ದ ಮಳೆ ಪ್ರಮಾಣವನ್ನು ಮಾಪನ ಮಾಡಬೇಕಾದ ರೇನ್ ಗೇಜ್ ಸ್ಟೇಷನ್ ಕೆಲವೆಡೆ ಕಾರ್ಯನಿರ್ವಹಿಸುತ್ತಿಲ್ಲ ಎಂಬುದನ್ನು ಅರಿತ ಅವರು, ಸಮರ್ಪಕ ಕಾರ್ಯನಿರ್ವಹಣೆ ಇಲ್ಲದೆ ಹೋದಲ್ಲಿ ನಿಖರ ಮಳೆ ಪ್ರಮಾಣ ಸಂಗ್ರಹಣೆ ಕಷ್ಟಸಾಧ್ಯ. ಕೂಡಲೆ ಅವೆಲ್ಲ ಸ್ಟೇಷನ್‌ಗಳನ್ನು ದುರಸ್ತಿಪಡಿಸಬೇಕೆಂದರು. ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್ ಮಾತನಾಡಿ ಈಗಾಗಲೆ ಕೆ.ಎಸ್.ಎನ್.ಡಿ.ಎಂ.ಸಿ. ಸಂಸ್ಥೆಯಿಂದ ಟೆಂಡರ್ ಕರೆದಿದ್ದು, ದುರಸ್ತಿ ಕಾರ್ಯ ನಡೆದಿದೆ ಎಂದು ಉತ್ತರಿಸಿದರು.

ಜಿಲ್ಲೆಯ ವಿವಿಧ ಜಲಾಶಯಗಳ ಸ್ಥಿತಿಗತಿ ಅವಲೋಕಿಸಿದ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು, ಮುಂದಿನ ದಿನದಲ್ಲಿ ಮಳೆ ಬಾರದೆ ಹೋದಲ್ಲಿ ಕುಡಿಯುವ ನೀರಿಗೆ ಪರ್ಯಾಯ ವ್ಯವಸ್ಥೆ ಸಹ ಮಾಡಿಟ್ಟುಕೊಳ್ಳಬೇಕು. ಬಾವಿ, ಕೊಳವೆ ಬಾವಿ ಜಲಮೂಲಗಳ ನೆರವಿನಿಂದ ನೀರು ಪೂರೈಕೆ ಮಾಡಬೇಕು. ಕಲಬುರಗಿ ನಗರದಲ್ಲಿ ನಡೆಯುತ್ತಿರುವ 24 ಗಂಟೆ ನಿರಂತರ ಕುಡಯುವ ನೀರು ಯೋಜನೆ ಕಾಮಗಾರಿಗೆ ವೇಗ ಹೆಚ್ಚಿಸಬೇಕು ಮತ್ತು ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದ ಕಡೆ ಟ್ಯಾಂಕರ್ ಮೂಲಕ ಪೂರೈಸಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಸೂಚನೆ ಕೊಟ್ಟರು.

ಈ ಸಂದರ್ಭದಲ್ಲಿ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಮಾತನಾಡಿ ನಗರದ ಜನತೆಗೆ ಕುಡಿಯುವ ನೀರಿನ ಶಾಶ್ವತ ಪರಿಹಾರಕ್ಕೆ ನಾರಾಯಣಪುರ ಜಲಾಶಯದಿಂದ ನೀರು ತರುವ ಪೈಪ್ ಲೈನ್ ಕಾಮಗಾರಿಯ 1,850 ಕೋಟಿ ರೂ. ಮೊತ್ತದ ಯೋಜನೆ ಡಿ.ಪಿ.ಆರ್ ಸಿದ್ಧವಾಗಿದೆ. ಪ್ರಸಕ್ತ ನಗರದಲ್ಲಿ ನೀರಿನ ಸಮಸ್ಯೆ ಇದ್ದ ವಾರ್ಡ್‌ನಲ್ಲಿ ಪ್ರತಿ ದಿನ 200 ಟ್ಯಾಂಕರ್ ನೀರು ಪೂರೈಕೆ ಮಾಡಲಾಗುತ್ತಿದೆ ಎಂದರು.

ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್ ಮಾತನಾಡಿ ಕಲೆದ ಜೂನ್ 1 ರಿಂದ ಇಲ್ಲಿಯವೆಗೆ ವಾಡಿಕೆಯಂತೆ 168.1 ಮಿಲಿ ಮಿಟರ್ ಮಳೆಯಾಗಬೇಕಿತ್ತು. ಆಗಿದ್ದು ಕೇವಲ 80.8 ಮಿಲಿ ಮೀಟರ್ ಮಾತ್ರ. ಹೀಗಾಗಿ ಮಳೆ ಕೊರತೆಯಿಂದ ಮುಂಗಾರು ಋತುವಿನಲ್ಲಿ ನಿಗದಿತ ಗುರಿ 8,90,633.8 ಹೆಕ್ಟೇರ್ ಪೈಕಿ ಇದೂವರೆಗೆ 2,72,199 ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬಿತ್ತನೆಯಾಗಿದೆ. ಜಿಲ್ಲೆಯ ಹಲವು ತಾಲೂಕಿನಲ್ಲಿ ಬಿತ್ತನೆಗೆ ಬೇಕಾದ ಮಳೆ ಇನ್ನು ಬಂದಿಲ್ಲ. ಭತ್ತ, ಉದ್ದು, ತೊಗರಿ, ಹೆಸರು, ಸೋಯಾ ಅವರೆ, ಮೆಕ್ಕೆಜೋಳ, ಸಜ್ಜೆ, ಸೂರ್ಯಕಾಂತಿ ಬೆಳೆಗಳ ಬಿತ್ತನೆಗೆ ಈಗಾಗಲೆ 22,192 ಕ್ವಿಂಟಾಲ್ ವಿತರಿಸಿದೆ. ಅದೇ ರೀತಿ 51,045 ಮೆಟ್ರಿಕ್ ಟನ್ ರಸಗೊಬ್ಬರ ವಿತರಿಸಿದ್ದು, 32,894 ಮೆ.ಟನ್ ಇನ್ನು ಸ್ಟಾಕ್ ಇದೆ ಎಂದರು.

ಪಶುಸಂಗೋಪನಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಸಂಜಯ್ ರೆಡ್ಡಿ ಮಾತನಾಡಿ ಮುಂದಿನ 34 ವಾರಕ್ಕೆ ಬೇಕಾಗುವ ಮೇವು ಜಿಲ್ಲೆಯಲ್ಲಿ ದಾಸ್ತಾನಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಬೆಳೆ ವಿಮೆ ನೋಂದಣಿ ಹೆಚ್ಚಿಸಿ: ಬೆಳೆ ವಿಮೆ ಕುರಿತು ಚರ್ಚೆಯಲ್ಲಿ ಮಾತನಾಡಿದ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸುಬೋಧ ಯಾದವ, ಕಳೆದ ವರ್ಷ ಜಿಲ್ಲೆಗೆ 650 ಕೋಟಿ ರೂ. ಬೆಳೆ ವಿಮೆ ಮಂಜೂರಾಗಿದ್ದು, ರೈತರಿಗೆ ತುಂಬಾ ಅನುಕೂಲವಾಗಿದೆ. ಈ ವರ್ಷ ಸಹ ಬರದ ಛಾಯೆ ಆವರಿಸಿರುವುದರಿಂದ ರೈತಾಪಿ ಜನರು ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯಡಿ ನೋಂದಣಿ ಮಾಡಿಕೊಂಡಲ್ಲಿ ಪ್ರಕೃತಿ ವಿಕೋಪ ಸೇರಿದಂತೆ ಇನ್ನಿತರ ಕಷ್ಟ ಕಾಲದಲ್ಲಿ ಅವರ ನೆರವಿಗೆ ಬರಲಿದೆ. ಹೀಗಾಗಿ ರೈತರಲ್ಲಿ ಬೆಳೆ ವಿಮೆಗೆ ಜಾಗೃತಿ ಮೂಡಿಸಿ ನೋಂದಣಿ ಹೆಚ್ಚಿಸಬೇಕೆಂದು ಕೃಷಿ ಅಧಿಕಾರಿಗಳಿಗೆ ಸೂಚಿಸಿದರು.

ಸಮಸ್ಯಾತ್ಮಕ ಹಳ್ಳಿಗಳಿಗೆ ಶಾಶ್ವತ ಯೋಜನೆ ರೂಪಿಸಿ: ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರು ಸಮಸ್ಯೆ ಕುರಿತು ಚರ್ಚೆಯಲ್ಲಿ ಪ್ರಸ್ತುತ ಜಿಲ್ಲೆಯಲ್ಲಿ 5 ಗ್ರಾಮಗಳಿಗೆ ಟ್ಯಾಂಕರ್ ಮೂಲಕ ಮತ್ತು 35 ಗ್ರಾಮಗಳಿಗೆ ಖಾಸಗಿ ಬೋರವೆಲ್ ಬಾಡಿಗೆ ಪಡೆದು ನೀರು ಪೂರೈಸಲಾಗುತ್ತಿದೆ. ಪ್ರತಿ ವರ್ಷ 168 ಗ್ರಾಮಗಳು ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿವೆ ಎಂದು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಇ.ಇ. ಜಗದೇವಪ್ಪ ಜೀವಣಗಿ ಅವರು ಸಭೆಗೆ ತಿಳಿಸಿದರು.

ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸುಬೋಧ ಯಾದವ ಮಾತನಾಡಿ, ಪ್ರತಿ ವರ್ಷ ಈ ಗ್ರಾಮಗಳಿಗೆ ಬಾಡಿಗೆ ಕೊಳವೆ ಬಾವಿ, ಟ್ಯಾಂಕರ್ ಮೂಲಕ ನೀರು ಪೂರೈಸುವುದು ತಾತ್ಕಲಿಕ ವ್ಯವಸ್ಥೆ. ಆದರೆ ಈ ಗ್ರಾಮಗಳಿಗೆ ಬಹುಗ್ರಾಮ ಕುಡಿಯುವ ನೀರು ಯೋಜನೆ ಸೇರಿದಂತೆ ಇನ್ನಿತರ ಯೋಜನೆಗಳ ಮೂಲಕ ಶಾಶ್ವತ ಪರಿಹಾರ ಕಂಡುಕೊಳ್ಳಬೇಕು. ಆ ನಿಟ್ಟಿನಲ್ಲಿ ಯೋಜನೆ ರೂಪಿಸಬೇಕೆಂದು ಸಲಹೆ ನೀಡಿದರು.

ಇ.ಇ. ಜಗದೇವಪ್ಪ ಜೀವಣಗಿ ಮಾತು ಮುಂದುವರೆಸಿ, ಪ್ರಸಕ್ತ ಸಾಲಿಗೆ ಜಿಲ್ಲೆಯಲ್ಲಿ ಹಳ್ಳಿಯಲ್ಲಿನ ಕುಡಿಯುವ ನೀರು ಸರಬರಾಜಿಗೆಂದೆ ಗ್ರಾಮೀಣಾಭಿವೃದ್ಧಿ ಇಲಾಖೆಯು 5 ಕೋಟಿ ರೂ. ಹಣ ಬಿಡುಗಡೆ ಮಾಡಿದ್ದು, ಬೋರವೆಲ್ ಕೊರೆಸಲು 33 ಲಕ್ಷ ರೂ. ಇದೂವರೆಗೆ ಖರ್ಚು ಮಾಡಿದೆ. ಕಡಿಯುವ ನೀರಿಗೆ ಯಾವುದೇ ಹಣದ ಕೊರತೆ ಇಲ್ಲ ಎಂದು ಸ್ಪಷ್ಟಪಡಿಸಿದರು.

ಕೆ.ಕೆ.ಆರ್.ಡಿ.ಬಿ. ಕಾಮಗಾರಿ ವಿಳಂಬಕ್ಕೆ ಅಸಮಾಧಾನ: ಕೆ.ಕೆ.ರ್.ಡಿ.ಬಿ. ಮಂಡಳಿ ಅನುದಾನದಡಿ ಜಿಲ್ಲೆಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಿದ ಉಸ್ತುವಾರಿ ಕಾರ್ಯದರ್ಶಿಗಳು, ಕಳೆದ 2024–25ನೇ ಸಾಲಿನಲ್ಲಿ ಮಂಜೂರಾದ ಕಾಮಗಾರಿಗೆ ಹಣ ಬಿಡುಗಡೆ ಮಾಡಿದರೂ ಇದೂವರೆಗೆ ಕೆಲ ಕಾಮಗಾರಿಗಳನ್ನು ಆರಂಭಿಸಿದ ಲೋಕೋಪಯೋಗಿ ಇಲಾಖೆ, ಕೆ.ಆರ್.ಐ.ಡಿ.ಎಲ್ ಕಾರ್ಯಶೈಲಿಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಅವರು, ಎರಡು ವರ್ಷವಾದರ ಕಾಮಗಾರಿನೆ ಆರಂಭಿಸಿಲ್ಲ ಎಂದರೆ ಮುಗಿಸೋದು ಯಾವಾಗ ಎಂದು ಇ.ಇ. ಗಳಿಗೆ ಪ್ರಶ್ನಿಸಿದ ಅವರು, ನಿಮಗೆ ಕೆಲಸ ಹೆಚ್ಚಾದರೆ ಏಕೆ ಕಾಮಗಾರಿ ವಹಿಸಿಕೊಂಡಿದ್ದೀರಿ ಎಂದು ಗರಂ ಆದರು.

ಇನ್ನು ಮಂಡಳಿಯಿಂದ ಕೈಗೊಳ್ಳುವ ಯಾವುದೇ ಕಾಮಗಾರಿ ಪ್ರಗತಿಯ ವಿವರವನ್ನು ಸಂಬಂಧಪಟ್ಟ ಇಲಾಖೆಯವರು ಆಗಾಗ ಮಂಡಳಿ ಗಮನಕ್ಕೆ ತರಬೇಕು ಮತ್ತು ಮಂಡಳಿ ಅಧಿಕಾರಿಗಳಿಂದ ತಪಾಸಣೆಗೆ ಒಳಪಡಿಸಬೇಕು ಎಂದು ಸಲಹೆ ನೀಡಿದರು. ಕೆ.ಕೆ.ಆರ್.ಡಿ.ಬಿ. ಕಾರ್ಯದರ್ಶಿ ನಲಿನ್ ಅತುಲ್, ಅಪರ ನಿರ್ದೇಶಕಿ ಪ್ರವೀಣ್ ಪ್ರಿಯಾ ಜಿಲ್ಲೆಯಲ್ಲಿ ನಡೆಯುತ್ತಿರುವ ಮಂಡಳಿ ಕಾಮಗಾರಿಗಳ ಕುರಿತು ವಿವರಿಸಿದರು.

ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಅವರು ಜಿಲ್ಲೆಯಲ್ಲಿ ಎನ್.ಡಿ.ಆರ್.ಎಫ್. ನಡಿ ಹಣ ಖರ್ಚು ಮಾಡಲು 36.47 ಕೊಟಿ ರೂ. ಲಭ್ಯವಿದೆ ಎಂದರಲ್ಲದೆ ಪ್ರಸ್ತುತ ಜಿಲ್ಲೆಯಾದ್ಯಂತ ನಡೆಯುತ್ತಿರುವ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯದ ಕುರಿತು ಉಸ್ತುವಾರಿ ಕಾರ್ಯದರ್ಶಿಗಳಿಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಇಕ್ರಮ್ ಶರೀಫ್, ಜಿಲ್ಲಾ ಪಂಚಾಯತ್ ಸಿ.ಇ.ಓ ರಾಹುಲ್ ಸಂಕನುರ್, ಸಹಾಯಕ ಆಯುಕ್ತರಾದ ಸಾಹಿತ್ಯ ಆಲದಕಟ್ಟಿ, ಪ್ರೋಬೇಷನರ್ ಐ.ಎ.ಎಸ್ ಅಧಿಕಾರಿ ಶಿಖರ್ ಮೋಘಾ, ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ಸಂತೋಷ ಇನಾಂದಾರ ಸೇರಿದಂತೆ ಸಣ್ಣ ನೀರಾವರಿ, ಕೆ.ಎನ್.ಎನ್.ಎಲ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಭಾಗವಹಿಸಿದ್ದರು.

# ರೋಹಿತ್ ಶರ್ಮಾ ನಿವೃತ್ತಿ ಗೊಂದಲ: ಆಯ್ಕೆಗಾರರಿಗೆ ಬಿಸಿಸಿಐ ಎಚ್ಚರಿಕೆ



**ನವದೆಹಲಿ, ಜು.18**–ತಂಡದ ನಾಯಕ ರೋಹಿತ್ ಶರ್ಮಾ ಅವರ ಏಕದಿನ ಕ್ರಿಕೆಟ್ ಭವಿಷ್ಯ ಮತ್ತು ನಿವೃತ್ತಿ ಕುರಿತು ಹರಿದಾಡುತ್ತಿರುವ ವರದಿಗಳ ಬಗ್ಗೆ ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ. ಈ ಹಿನ್ನೆಲೆಯಲ್ಲಿ ಅಜಿತ್ ಅಗರ್ಕರ್ ನೇತೃತ್ವದ ಆಯ್ಕೆ ಸಮಿತಿಗೆ ಬಿಸಿಸಿಐ ಕಟ್ಟುನಿಟ್ಟಿನ ಸಂದೇಶ ರವಾನಿಸಿದೆ.

ಮಾಧ್ಯಮ ವರದಿಗಳಿಗೆ ಬಿಸಿಸಿಐ ಬ್ರೇಕ್

ಇಂಗ್ಲೆಂಡ್ ಪ್ರವಾಸದ ನಂತರ ರೋಹಿತ್ ಶರ್ಮಾ ಅವರನ್ನು ಏಕದಿನ ತಂಡದ ಮುಂದಿನ ಯೋಜನೆಗಳಿಂದ ಹೊರಗಿಡಲು ಆಯ್ಕೆದಾರರು ನಿರ್ಧರಿಸಿದ್ದಾರೆ ಮತ್ತು ಲಾರ್ಡ್ಸ್‌ನಲ್ಲಿ ನಡೆಯಲಿರುವ ಪಂದ್ಯವೇ ಅವರ ಕೊನೆಯ ಅಂತಾರಾಷ್ಟ್ರೀಯ ಪಂದ್ಯವಾಗಲಿದೆ ಎಂಬ ಊಹಾಪೋಹಗಳು ಹರಡಿದ್ದವು.

ಆದರೆ, ಬಿಸಿಸಿಐ ಕಾರ್ಯದರ್ಶಿ ದೇವಜಿತ್ ಸೈಕಿಯಾ ಈ ವರದಿಗಳನ್ನು ಅಧಿಕೃತವಾಗಿ ತಳ್ಳಿಹಾಕಿದ್ದಾರೆ. ಲಾರ್ಡ್ಸ್‌ನಲ್ಲಿ ರೋಹಿತ್ ಕೊನೆಯ ಪಂದ್ಯ ಆಡುತ್ತಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಆಯ್ಕೆ ಸಮಿತಿಗೆ ಖಡಕ್ ಎಚ್ಚರಿಕೆ

ಆಟಗಾರರು ಮತ್ತು ಆಯ್ಕೆದಾರರ ನಡುವಿನ ಖಾಸಗಿ ಹಾಗೂ ಸೂಕ್ಷ್ಮ ಚರ್ಚೆಗಳು ಮಾಧ್ಯಮಗಳಿಗೆ ಸೋರಿಕೆಯಾಗುತ್ತಿರುವುದಕ್ಕೆ ಬಿಸಿಸಿಐ ಮಂಡಳಿ ಅಸಮಾಧಾನಗೊಂಡಿದೆ.

ತಂಡದ ಆಂತರಿಕ ಮತ್ತು ಗೌಪ್ಯ ವಿಷಯಗಳನ್ನು ಯಾವುದೇ ಕಾರಣಕ್ಕೂ ಸಾರ್ವಜನಿಕವಾಗಿ ಹಂಚಿಕೊಳ್ಳಬಾರದು ಎಂದು ಆಯ್ಕೆದಾರರಿಗೆ ಸೂಚಿಸಲಾಗಿದೆ.

ರೋಹಿತ್ ಶರ್ಮಾ ಅವರ ಭವಿಷ್ಯದ ಕುರಿತು ನಡೆಯುತ್ತಿರುವ ಚರ್ಚೆಗಳ ಬಗ್ಗೆ ಮುಖ್ಯ ಕೋಚ್ ಗೌತಮ್ ಗಂಭೀರ್ ಅವರಿಗೂ ಸಂಪೂರ್ಣ ಮಾಹಿತಿ ಇತ್ತು ಎಂದು ತಿಳಿದುಬಂದಿದೆ.

ರೋಹಿತ್ ಶರ್ಮಾ ಒಲವು ಏನಿದೆ?

ವರದಿಗಳ ಪ್ರಕಾರ, ರೋಹಿತ್ ಶರ್ಮಾ ಅವರಿಗೆ ಸದ್ಯಕ್ಕೆ ನಿವೃತ್ತಿ ಹೊಂದುವ ಯಾವುದೇ ಆಲೋಚನೆ ಇಲ್ಲ. ಅವರು ಈಗಾಗಲೇ ಬಿಸಿಸಿಐ ಹಿರಿಯ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಿದ್ದು, 2027ರ ಏಕದಿನ ವಿಶ್ವಕಪ್‌ನಲ್ಲಿ ಆಡುವ ಇಚ್ಛೆಯನ್ನು ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ.

ಆದರೆ, ಮತ್ತೊಂದೆಡೆ ಆಯ್ಕೆದಾರರು ಮತ್ತು ಮಂಡಳಿಯ ನಡವಳಿಕೆಯಿಂದ ರೋಹಿತ್ ಅಸಮಾಧಾನಗೊಂಡಿದ್ದು, ಶೀಘ್ರದಲ್ಲೇ ತಮ್ಮ ಭವಿಷ್ಯದ ಬಗ್ಗೆ ದೊಡ್ಡ ನಿರ್ಧಾರ ಕೈಗೊಳ್ಳಬಹುದು ಎಂಬ ತದ್ವಿರುದ್ಧ ವರದಿಗಳೂ ಕೇಳಿಬರುತ್ತಿವೆ.

ಫಾರ್ಮ್ ಕೊರತೆ ಮತ್ತು ಜೈಸ್ವಾಲ್ ಮೇಲಿನ ಒಲವು ಈ ವರ್ಷ ರೋಹಿತ್ ಶರ್ಮಾ ಅವರ ಏಕದಿನ ಪ್ರದರ್ಶನ ಅಷ್ಟೇನೂ ಆಶಾದಾಯಕವಾಗಿಲ್ಲ.

ಕಳೆದ 8 ಇನ್ನಿಂಗ್ಸ್‌ಗಳಲ್ಲಿ ಅವರು 30.12 ರ ಸರಾಸರಿಯಲ್ಲಿ ಕೇವಲ 241 ರನ್ ಗಳಿಸಿದ್ದು, ಕೇವಲ ಒಂದು ಅರ್ಧಶತಕ ಬಾರಿಸಿದ್ದಾರೆ.

ಇಂಗ್ಲೆಂಡ್ ವಿರುದ್ಧದ ಪ್ರಸ್ತುತ ಸರಣಿಯ ಮೊದಲ ಎರಡು ಪಂದ್ಯಗಳಲ್ಲೂ ಅವರು ಕ್ರಮವಾಗಿ 11 ಮತ್ತು 26 ರನ್ ಗಳಿಸಿ ನಿರಾಸೆ ಮೂಡಿಸಿದ್ದಾರೆ.

ಇದೇ ವೇಳೆ, ಆಯ್ಕೆ ಸಮಿತಿಯು ಯುವ ಆಟಗಾರ ಯಶಸ್ವಿ ಜೈಸ್ವಾಲ್ ಅವರಿಗೆ ಸೀಮಿತ ಓವರ್‌ಗಳ ಕ್ರಿಕೆಟ್‌ನಲ್ಲಿ ಹೆಚ್ಚಿನ ಅವಕಾಶ ನೀಡಲು ಒಲವು ತೋರಿದೆ. ಸಿಕ್ಕ ಅವಕಾಶಗಳನ್ನು ಜೈಸ್ವಾಲ್ ಸಮರ್ಥವಾಗಿ ಬಳಸಿಕೊಂಡಿರುವುದರಿಂದ, ಅವರಿಗೆ ದೀರ್ಘಾವಧಿಯ ರನ್ ನೀಡಲು ಆಯ್ಕೆದಾರರು ಯೋಜಿಸುತ್ತಿದ್ದಾರೆ ಎನ್ನಲಾಗಿದೆ.

# ಶಿಕ್ಷಕರ ಸಿಇಟಿ: ಉಚಿತ ವಿಶೇಷ ಕಾರ್ಯಾಗಾರ 26ಕ್ಕೆ



**ಬೀದರ್:** ವಿನ್ನರ್ ಹಾಗೂ ಸ್ಪರ್ಧಾ ಜೀನಿಯಸ್ ಸ್ಪರ್ಧಾತ್ಮಕ ಪರೀಕ್ಷಾ ಕೇಂದ್ರದ ವತಿಯಿಂದ ನಗರದ ತಾಯಿ–ಮಗು ವೃತ್ತ ಸಮೀಪದ ನರ್ಚರ್ ಸ್ಪರ್ಧಾತ್ಮಕ ಅಧ್ಯಯನ ಕೇಂದ್ರದಲ್ಲಿ ಜುಲೈ 26 ರಂದು ಎಚ್.ಎಸ್.ಟಿ.ಆರ್, ಜಿ.ಪಿ.ಎಸ್.ಟಿ.ಆರ್, ಪಿ.ಎಸ್.ಟಿ.ಆರ್, ಕ್ರೈಸ್ ಶಿಕ್ಷಕರು, ಗ್ರಾಮ ಲೆಕ್ಕಾಧಿಕಾರಿ ಹಾಗೂ ಪೊಲೀಸ್ ಕಾನ್‌ಸ್ಟೆಬಲ್ ಹುದ್ದೆಗಳ ಸಾಮಾನ್ಯ ಪ್ರವೇಶ ಪರೀಕ್ಷೆ ಕುರಿತು ಉಚಿತ ವಿಶೇಷ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ.

ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ರ ವರೆಗೆ ನಡೆಯಲಿರುವ ಕಾರ್ಯಾಗಾರದಲ್ಲಿ ಖ್ಯಾತ ಸಂಪನ್ಮೂಲ ವ್ಯಕ್ತಿಗಳಾದ ಧಾರವಾಡದ ಡಾ. ವಿಜಯಕುಮಾರ ಎಂ.ವಿ. (ಮಗುವಿನ ಮನೋವಿಜ್ಞಾನ ಹಾಗೂ ಇಂಗ್ಲೀಷ್ ), ಬಸವರಾಜ ಜನಕಟ್ಟಿ (ಬೌದ್ಧಿಕ ಸಾಮನ್ಯ ಮತ್ತು ಗಣಿತ) ಹಾಗೂ ಸಂಜಯ್ ಪಾಟೀಲ (ಅರ್ಥಶಾಸ್ತ್ರ) ಮಾರ್ಗದರ್ಶನ ಮಾಡಲಿದ್ದಾರೆ.

ಸಾಮಾನ್ಯ ಪ್ರವೇಶ ಪರೀಕ್ಷೆ ಬರೆಯಲಿರುವ ಜಿಲ್ಲೆಯ ಅಭ್ಯರ್ಥಿಗಳು ಕಾರ್ಯಾಗಾರದ ಸದುಪಯೋಗ ಪಡೆಯಬೇಕು ಎಂದು ಕೇಂದ್ರದ ನಿರ್ದೇಶಕಿ ಪೂಜಾ ಎಚ್. ಪಾಟೀಲ ಹಾಗೂ ಮಹಾದೇವಿ ಎಂ. ಬುಕ್ಕಾ ಕೋರಿದ್ದಾರೆ.

ಕಾರ್ಯಾಗಾರದ ಕುರಿತು ಹೆಚ್ಚಿನ ಮಾಹಿತಿ ಹಾಗೂ ಹೆಸರು ನೋಂದಣಿಗೆ ಮೊಬೈಲ್ ಸಂಖ್ಯೆ 8970850873 ಅಥವಾ 9902580095 ಗೆ ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

# ಸೋಲಾರ್ ಕಂಪನಿಯಿಂದ ರೈತರ ಜಮೀನು ಕಬಳಿಕೆ: ಆರೋಪ ಆಳಂದ ಚೆಕ್‌ಪೋಸ್ಟ್‌ನಲ್ಲಿ ರೈತ ಸಂಘಟನೆ ಪ್ರತಿಭಟನೆ



**ಆಳಂದ:ಜು.18:** ತಾಲೂಕಿನ ರೈತರ ಜಮೀನನ್ನು ಒಪ್ಪಂದ ಮೀರಿ ಆಕ್ರಮಿಸಿಕೊಂಡಿರುವ ಆರೋಪ ಹೊತ್ತಿರುವ ಸೋಲಾರ್ ಕ್ರಾಫ್ಟ್ ಪವರ್ ಇಂಡಿಯಾ 7 ಪ್ರೈವೇಟ್ ಲಿಮಿಟೆಡ್ (ಬ್ಲೂಪಿನ್ ಎನರ್ಜಿ) ಸಂಸ್ಥೆ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಹಾಗೂ ಸಂತ್ರಸ್ತ ರೈತರಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಪಟ್ಟಣದ ಚೆಕ್‌ಪೋಸ್ಟ್ ಬಳಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನಾ ನಿರತ ರೈತರು ತಹಶೀಲ್ದಾರ ಅಣ್ಣಾರಾವ್ ಪಾಟೀಲ ಅವರಿಗೆ ಮನವಿ ಪತ್ರ ಸಲ್ಲಿಸಿ, ಸಮಸ್ಯೆಯ ಗಂಭೀರತೆಯನ್ನು ವಿವರಿಸಿದ ಪ್ರತಿಭಟನಾ ನಿರತರು, ಈಗಾಗಲೇ ದಿನಾಂಕ 13.07.2026ರಂದು ರೈತ ಸಂಘಟನೆಗಳು ಜಿಲ್ಲಾಧಿಕಾರಿಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದವು. ಸೋಲಾರ್ ಕ್ರಾಫ್ಟ್ ಪವರ್ ಇಂಡಿಯಾ 7 ಪ್ರೈವೇಟ್ ಲಿಮಿಟೆಡ್ ಸಂಸ್ಥೆಯ ವಿಭಾಗೀಯ ಜವಾಬ್ದಾರಿ ಹೊತ್ತಿರುವ ಮದನ್ ಬಿದರಿ ವಿರುದ್ಧ ಈಗಾಗಲೇ ಎಫ್‌ಐಆರ್ ದಾಖಲಾಗಿದ್ದು, ರೈತರ ಜಮೀನನ್ನು ಒಪ್ಪಂದ ಮೀರಿ ಆಕ್ರಮಿಸಿಕೊಂಡ ಹಾಗೂ ಜಮೀನು ಬಿಟ್ಟುಕೊಡುವಂತೆ ರೈತರನ್ನು ಬೆದರಿಕೆ ಒಡ್ಡಿದ ಆರೋಪ ಕಂಪನಿಯ ಮೇಲಿದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಕಂಪನಿಯ ಜೊತೆ ಶಾಮೀಲಾಗಿರುವ ಸಂಶಯ ವ್ಯಕ್ತಪಡಿಸಿರುವ ರೈತ ಸಂಘಟನೆಗಳು, ಸಂಬಂಧಿಸಿದ ಪಿಎಸ್‌ಐ ಅವರನ್ನೂ ಅಮಾನತುಗೊಳಿಸಬೇಕು ಹಾಗೂ ಸಂತ್ರಸ್ತ ರೈತರಿಗೆ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು.

ಒಪ್ಪಂದ ಮೀರಿ ಜಮೀನು ಆಕ್ರಮಿಸಿಕೊಂಡಿರುವುದಕ್ಕೆ ಈಗಿನ ಮಾರುಕಟ್ಟೆ ದರಕ್ಕಿಂತ ಮೂರು ಪಟ್ಟು ಅಂದರೆ ಪ್ರತಿ ಎಕರೆಗೆ 22 ಲಕ್ಷ ರೂ. ಪರಿಹಾರ ನೀಡಬೇಕು. ಜಮೀನು ಕಳೆದುಕೊಂಡ ರೈತರ ಕುಟುಂಬದ ಸದಸ್ಯರಿಗೆ ಕಂಪನಿ ಉದ್ಯೋಗ ನೀಡಬೇಕು. ಲೀಸಿಂಗ್ (ಬಾಡಿಗೆ) ಆಧಾರದಲ್ಲಿ ಜಮೀನು ಪಡೆದಿರುವ ರೈತರಿಗೆ ಪ್ರತಿ ಎಕರೆಗೆ 50 ಸಾವಿರ ರೂ. ಬಾಡಿಗೆ ನೀಡಬೇಕು. ಸೋಲಾರ್ ಘಟಕದ ವ್ಯಾಪ್ತಿಯ ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಬೇಕು. ಅಂಬೇವಾಡ ಗ್ರಾಮದ ರೈತ ಅನಿಲ್ ತಂದೆ ಮಲ್ಲಪ್ಪ ಬುರಾಡಪುರ ಅವರಿಗೆ ಕೂಡಲೇ ಸ್ಥಳದಲ್ಲಿ ಸುಮಾರು 15 ಲಕ್ಷ ರೂ. ಪರಿಹಾರ ನೀಡಬೇಕು ಎಂದು ಒತ್ತಾಯಿಸಿದ ಪ್ರತಿಭಟನಾಕಾರರು, ಬೇಡಿಕೆಗಳನ್ನು ಶೀಘ್ರ ಈಡೇರಿಸದಿದ್ದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಎದುರು ಬೃಹತ್ ಪ್ರತಿಭಟನೆ ಹಾಗೂ ಆಳಂದ ತಾಲೂಕು ಬಂದ್ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿ ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿದ ತಹಸೀಲ್ದಾರ ಅಣ್ಣಾರಾವ್ ಪಾಟೀಲರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾಧ್ಯಕ್ಷ ಮಹಾಂತೇಶ ಎಸ್.ಜಮಾದಾರ, ಗೌರವ ಅಧ್ಯಕ್ಷ ವಿಠ್ಠಲ ಮಾಕಗೌಡ್ರು, ಮಹಿಳಾಧ್ಯಕ್ಷ ಕಮಲಬಾಯಿ ಸಜ್ಜನ್, ತಾಲೂಕು ಅಧ್ಯಕ್ಷ ಸಂಗನಬಸವ ಕಟಕೆ, ಉಪಾಧ್ಯಕ್ಷ ಸಂಜುಕುಮಾರ ಮಂಠಾಳೆ, ಮಲ್ಲಿನಾಥ ದೊಗುಂಡ, ಸುರೇಂದ್ರ ಪಾಟೀಲ, ರವಿಕಾಂತ ಸಕ್ಕರಗಿ, ಶಿವಯ್ಯಾ ಸ್ವಾಮಿ, ಮಲ್ಲು ಉದ್ದನಶೆಟ್ಟಿ, ಶ್ರೀಶೈಲ ಗೊಳೆ ಅನೇಕರು ಭಾಗವಹಿಸಿದ್ದರು.

# ಸೇಡಂ ಮಳಖೇಡ ಆರೋಗ್ಯ ಕೇಂದ್ರಗಳಿಗೆ ಆರೋಗ್ಯ ಇಲಾಖೆ ಪ್ರಧಾನ ಕಾರ್ಯದರ್ಶಿ ರಿತ್ವಿಕ್ ರಂಜನ್ ಪಾಂಡ್ವೆ ಬೇಟಿ ಪರಿಶೀಲನೆ

**ಸೇಡಂ, ಜು, 18**: ತಾಲೂಕಿನ ಮಳಖೇಡ ಸಮುದಾಯ ಆರೋಗ್ಯ ಕೇಂದ್ರ ಹಾಗೂ ತಾಲೂಕು ಸರ್ಕಾರಿ ಸಾರ್ವಜನಿಕ ಆಸ್ಪತ್ರೆ ಸೇಡಂಗೆ ಕೇಂದ್ರಕ್ಕೆ ಕರ್ನಾಟಕ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ರಿತ್ವಿಕ್ ರಂಜನ್ ಪಾಂಡ್ವೆ ಅವರು ಬೇಟಿ ನೀಡಿ ಪರಿಶೀಲನೆ ನಡೆಸಲು ಆಗಮಿಸಿದಾಗ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಶರಣಬಸಪ್ಪ ಕ್ಯಾತನಾಳ, ತಾಲೂಕಾ ಟಿಎಚ್‌ಒ ಡಾ.ಸಂಜೀವಕುಮಾರ ಪಾಟೀಲ್,ಹೂವು ಗುಚ್ಚ ನೀಡಿ ಸ್ವಾಗತಿಸಿದರು. ಆಸ್ಪತ್ರೆಯಲ್ಲಿರುವ ವಿವಿಧ ಸಮಸ್ಯೆಗಳು ಹಾಗೂ ಕೊರತೆಗಳ ಬಗ್ಗೆ ಆರೋಗ್ಯ ಅಧಿಕಾರಿಗಳೊಂದಿಗೆ ಚರ್ಚಿಸಿದರು.ಈ ವೇಳೆಯಲ್ಲಿ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಶರಣಬಸಪ್ಪ ಕ್ಯಾತನಾಳ, ಉಪ ನಿರ್ದೇಶಕರಾದ ಡಾ. ಷರೀಫ್,ವಿಭಾಗೀಯ ಸಹ ನಿರ್ದೇಶಕರಾದ ಡಾ.ಶಂಕ್ರಪ್ಪ ಮೈಲಾರಿ,ತಾಲೂಕಾ ಟಿಎಚ್‌ಒ ಡಾ.ಸಂಜೀವಕುಮಾರ ಪಾಟೀಲ್, ಡಾ. ನಾಗನಾಜ ಮನ್ನೆ,ಡಾ.ಸಿದ್ದು ಪಾಟೀಲ್, ಡಾ.ರಾಜಕುಮಾರ ಬಾಳಿ,ತಾಂತ್ರಿಕ ಶಾಖೆಯ ಸೋಮಶೇಖರ ಪೂಜಾರಿ, ಕರಬಸ್ಸಪ್ಪ ಪಸರಗಿ, ಡಾ.ಎ.ಎಸ್. ರುದ್ರವಾಡಿ, ಡಾ.ವಿವೇಕಾನಂದರೆಡ್ಡಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶಿವಯೋಗಿ ಸತ್ಪಾಲ್, ಇಲಾಖೆಯ ಸಿಬ್ಬಂದಿಗಳಾದ ಕಂಟೆಪ್ಪ, ಜಗನ್ನಾಥ, ಸೇರಿದಂತೆ ಹಲವರು ಉಪಸ್ಥಿತರಿದ್ದರು.



# ಮಳೆಗಾಗಿ ಗಂಗಾಮಾತೆಗೆ ವಿಶೇಷ ಪೂಜೆ, ಗ್ರಾಮ ದೇವತೆಗಳಿಗೆ ಜಲಾಭಿಷೇಕ



**ಯಾದಗಿರಿ:** ಜಿಲ್ಲೆಯಲ್ಲಿ ಸಮರ್ಪಕ ಮಳೆಯಾಗದೆ ಮುಂಗಾರು ಬೆಳೆಗಳು ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ ಯಾದಗಿರಿ ತಾಲೂಕಿನ ಮುದ್ನಾಳ ಗ್ರಾಮದಲ್ಲಿ ರೈತಾಪಿ ವರ್ಗ ಗಂಗಾಮಾತೆಗೆ ವಿಶೇಷ ಪೂಜೆ ಸಲ್ಲಿಸಿ, ಗ್ರಾಮ ದೇವತೆಗಳಿಗೆ ಜಲಾಭಿಷೇಕ ಮಾಡುವ ಮೂಲಕ ಉತ್ತಮ ಮಳೆಯಾಗುವಂತೆ ಪ್ರಾರ್ಥನೆ ಸಲ್ಲಿಸಿತು.

ಈ ಕುರಿತು ಮಾಹಿತಿ ನೀಡಿದ ಅಖಿಲ ಭಾರತೀಯ ಕೋಲಿ ಸಮಾಜದ ರಾಜ್ಯ ಸಂಘಟನಾ ಕಾರ್ಯದರ್ಶಿ ಹಾಗೂ ಸಾಮಾಜಿಕ ಹೋರಾಟಗಾರ ಉಮೇಶ ಕೆ. ಮುದ್ನಾಳ್, ಮುಂಜಾನೆ ತಮಟೆ ಬಾರಿಸುವ ಮೂಲಕ ಗ್ರಾಮಸ್ಥರು ಧಾರ್ಮಿಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಬಳಿಕ ಗ್ರಾಮದ ಸಮೀಪದ ಕೆರೆ ಹಾಗೂ ಬಾವಿಗಳಿಂದ ನೀರು ತಂದು ಗಂಗಾಮಾತೆ ಮತ್ತು ಗ್ರಾಮ ದೇವತೆಗಳಿಗೆ ಜಲಾಭಿಷೇಕ ನೆರವೇರಿಸಲಾಯಿತು. ಈ ಧಾರ್ಮಿಕ ಆಚರಣೆ ಐದು ದಿನಗಳ ಕಾಲ ನಿರಂತರವಾಗಿ ನಡೆಯಲಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಜೂನ್ ತಿಂಗಳಿನಿಂದ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದೇ ಕೃಷಿ ಚಟುವಟಿಕೆಗಳು ಹಿನ್ನಡೆ ಅನುಭವಿಸುತ್ತಿವೆ. ಹತ್ತಿ, ಹೆಸರು, ತೊಗರಿ ಸೇರಿದಂತೆ ವಿವಿಧ ಮುಂಗಾರು ಬೆಳೆಗಳನ್ನು ರೈತರು ಬಿತ್ತನೆ ಮಾಡಿದ್ದರೂ, ಮಳೆಯ ಕೊರತೆಯಿಂದ ಬೆಳೆಗಳು ಒಣಗುವ ಹಂತಕ್ಕೆ ತಲುಪಿವೆ. ಸಮಯಕ್ಕೆ ಮಳೆ ಬಂದರೆ ಉತ್ತಮ ಫಸಲು ಪಡೆಯಬಹುದು ಎಂಬ ನಿರೀಕ್ಷೆಯಲ್ಲಿದ್ದ ರೈತರಿಗೆ ಇದೀಗ ಆತಂಕ ಎದುರಾಗಿದೆ ಎಂದು ಹೇಳಿದರು.

ಮುಂಗಾರು ಮಳೆ ಕೈಕೊಟ್ಟ ಪರಿಣಾಮ ರೈತರು ಮಾತ್ರವಲ್ಲದೆ ಜನ ಹಾಗೂ ಜಾನುವಾರುಗಳಿಗೂ ಮುಂದಿನ ದಿನಗಳಲ್ಲಿ ಕುಡಿಯುವ ನೀರು ಮತ್ತು ಮೇವು ಕೊರತೆ ಉಂಟಾಗುವ ಭೀತಿ ಎದುರಾಗಿದೆ. ಇದೇ ಕಾರಣದಿಂದ ಗ್ರಾಮ ದೇವತೆಗಳ ಮೊರೆ ಹೋಗಿ ಮಳೆಯಾಗಲೆಂದು ವಿಶೇಷ ಪೂಜೆ ಹಾಗೂ ಜಲಾಭಿಷೇಕ ನಡೆಸಲಾಗುತ್ತಿದೆ ಎಂದು ಉಮೇಶ ಕೆ. ಮುದ್ನಾಳ್ ತಿಳಿಸಿದರು.

ಈ ಸಂದರ್ಭದಲ್ಲಿ ಮಲ್ಲಿಕಾರ್ಜುನ, ಸಾಬಣ್ಣ, ಪವನ, ವಿಶಾಲ, ಹಣಮಂತ, ಜಂಬಣ್ಣ, ದೊಡ್ಡ ಸಾಬಣ್ಣ, ಭೀಮರಾಯ, ದೇವಪ್ಪ, ಮಹಾದೇವ, ಮಲ್ಲಪ್ಪ, ಶಿವಪ್ಪ, ಚಂದಪ್ಪ, ಯಂಕಪ್ಪ ಸೇರಿದಂತೆ ಗ್ರಾಮಸ್ಥರು ಹಾಗೂ ಯುವಕರು ಉಪಸ್ಥಿತರಿದ್ದರು.

ಧೈರ್ಯದ ದಾರಿ ಭಾನುವಾರ: 19-07-2026

# ಎಸ್.ಐ.ಆರ್. ಉಸ್ತುವಾರಿಯಾಗಿ ಧನರಾಜ ತಾಳಂಪಳ್ಳಿ



**ಬೀದರ್:** ಕಾಂಗ್ರೆಸ್ ಪಕ್ಷವು ಬೀದರ್ ಹಾಗೂ ಯಾದಗಿರಿ ಜಿಲ್ಲೆಗಳ ಮತದಾರರ ಪಟ್ಟಿ ವಿಶೇಷಸಮಗ್ರ ಪರಿಷ್ಕರಣೆ (ಎಸ್ಐಆರ್) ಪ್ರಕ್ರಿಯೆಯ ಉಸ್ತುವಾರಿಯಾಗಿ ಜಿಲ್ಲೆಯವರೇ ಆದಕೆಪಿಸಿಸಿ ಸಹಕಾರ ವಿಭಾಗದ ಅಧ್ಯಕ್ಷ ಧನರಾಜ ತಾಳಂಪಳ್ಳಿ ಅವರನ್ನು ನೇಮಿಸಿದೆ.ಕೆಪಿಸಿಸಿ ಕಾರ್ಯಾಧ್ಯಕ್ಷ ಜಿ.ಸಿ. ಚಂದ್ರಶೇಖರ್ ಈ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.ಬೂತ್ ಮಟ್ಟದಲ್ಲಿ ಚುನಾವಣಾ ಅಧಿಕಾರಿಗಳು ಸರಿಯಾದ ಕ್ರಮದಲ್ಲಿ ಎಸ್ಐಆರ್ಅನುಷ್ಠಾನಗೊಳಿಸುವುದನ್ನು ಸೂಕ್ಷ್ಮವಾಗಿ ನೋಡಿಕೊಳ್ಳುವ ಜವಾಬ್ದಾರಿಯನ್ನು ತಾಳಂಪಳ್ಳಿಅವರಿಗೆ ವಹಿಸಲಾಗಿದೆ.

ಸಂಬಂಧಪಟ್ಟ ಜಿಲ್ಲೆಗಳಲ್ಲಿ ಜಿಲ್ಲಾ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂಪದಾಧಿಕಾರಿಗಳನ್ನು ಎಸ್ಐಆರ್ ಕಾರ್ಯಕ್ಕೆ ನಿಯೋಜಿಸಿ, ಪಕ್ಷದಿಂದ ನೇಮಕಗೊಂಡಬೂತ್‌ಮಟ್ಟದ ಏಜೆಂಟರ (ಬಿಎಲ್ಎ2) ಸಹಕಾರ ಪಡೆದು, ಚುನಾವಣಾ ಆಯೋಗದಿಂದ ನೇಮಕಗೊಂಡಬಿಎಲ್‌ಒಗಳ ಸಂಪರ್ಕದೊಂದಿಗೆ ಪ್ರತಿ ಮನೆಗೆ ಭೇಟಿ ನೀಡಿ, ಎಸ್.ಐ.ಆರ್. ಪ್ರಕ್ರಿಯೆಪಾರದರ್ಶಕವಾಗಿ ಪೂರ್ಣಗೊಳಿಸಲು ಸಹಕರಿಸಬೇಕು ಎಂದು ಸೂಚಿಸಿದ್ದಾರೆ.

# ಜಿಲ್ಲೆಯಲ್ಲಿ ಮಳೆ ಕೊರತೆ ಹಿನ್ನಲೆ ಸಮರ್ಪಕ ಕುಡಿಯುವ ನೀರು ಪೂರೈಕೆಗೆ: ಸಿಇಒ ಸೂಚನೆ



**ಹೊಸಪೇಟೆ.ಜು.18** ಜಿಲ್ಲೆಯ ಗ್ರಾಮೀಣ ಭಾಗಗಳ ಪ್ರತಿಯೊಂದು ಮನೆಗೂ ಕಡ್ಡಾಯವಾಗಿ ಶುದ್ಧ ಕುಡಿಯುವ ನೀರು ಹಾಗೂ ಸಮರ್ಪಕ ನೈರ್ಮಲ್ಯ ವ್ಯವಸ್ಥೆಯನ್ನು ತಲುಪಿಸಲು ಎಲ್ಲಾ ಇಲಾಖೆಗಳು ಪರಸ್ಪರ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ ನೋಂಗ್ಜಾಯ ಮಹಮದ್ ಅಲಿ ಅಕ್ರಂ ಷಾ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸ್ಥಳೀಯ ಜಿಲ್ಲಾ ಪಂಚಾಯಿತಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಮಾಸಿಕ ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ್ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗ್ರಾಮೀಣ ಭಾಗದಲ್ಲಿ ಹಮ್ಮಿಕೊಳ್ಳಲಾಗಿರುವ ಜಲಜೀವನ್ ಮಿಷನ್ ಹಾಗೂ ಸ್ವಚ್ಛ ಭಾರತ್ ಮಿಷನ್ ಯೋಜನೆಗಳ ಕಾಮಗಾರಿ ಇನ್ನೂ ಕೆಲವೆಡೆ ವಿವಿಧ ತಾಂತ್ರಿಕ ಕಾರಣಗಳಿಂದ ಪೂರ್ಣಗೊಂಡಿಲ್ಲ. ಕಾಮಗಾರಿ ವಿಳಂಬಕ್ಕೆ ಕಾರಣ ಸಮಸ್ಯೆಗಳ ಸೂಕ್ತ ಪರಿಹಾರ ಕಂಡುಕೊಂಡು ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸಿ, ಶುದ್ಧ ಮತ್ತು ಶಾಶ್ವತ ಕುಡಿಯುವ ನೀರು ಪೂರೈಸಬೇಕು. ಯಾವುದೇ ಕಾರಣಕ್ಕೂ ಸಾರ್ವಜನಿಕರಿಗೆ ಕುಡಿಯುವ ನೀರಿನ ತೊಂದರೆಯಾಗಬಾರದು. ಅಂತರ್ಜಲ ವೃದ್ಧಿ, ಜಲಮೂಲಗಳ ಸಂರಕ್ಷಣೆ ಹಾಗೂ ನೈರ್ಮಲ್ಯ ನಿರ್ವಹಣೆಗೆ ಮೊದಲ ಆದ್ಯತೆ ನೀಡಬೇಕು. ನಿಗದಿಪಡಿತ ಅವಧಿಯೊಳಗೆ ಕಾಮಗಾರಿಗಳನ್ನು ಪೂರ್ಣಗೊಳಿಸದಿದ್ದರೆ ಶಿಸ್ತು ಕ್ರಮ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಜಿಲ್ಲೆಯಲ್ಲಿ ಈ ಬಾರಿ ತೀವ್ರ ಮಳೆ ಅಭಾವದಿಂದ ಅಂತರ್ಜಲ ಮಟ್ಟ ಕುಸಿಯುತ್ತಿದೆ. ಈಗಾಗಲೇ ಜಿಲ್ಲೆಯ 36 ಗ್ರಾಮಗಳನ್ನು ನೀರಿನ ಸಮಸ್ಯೆ ಎದುರಿಸುತ್ತಿರುವ ಗ್ರಾಮಗಳೆಂದು ಗುರಿತಿಸಲಾಗಿದ್ದು, ಇದಕ್ಕಾಗಿ 46 ಖಾಸಗಿ ಕೊಳವೆ ಬಾವಿಗಳಿಂದ ನೀರು ಪೂರೈಕೆ ಮಾಡಲಾಗುತ್ತಿದೆ. ಇದೇ ರೀತಿ ಮುಂದುವರೆದಲ್ಲಿ ಜಿಲ್ಲಾದ್ಯಂತೆ ಕುಡಿಯುವ ನೀರಿನ ಸಮಸ್ಯೆ ಮತ್ತಷ್ಟು ಉಲ್ಬಣಗೊಳ್ಳುವ ಸಾಧ್ಯತೆ ಹೆಚ್ಚಿದೆ. ಆದ್ದರಿಂದ ನೀರು ಸರಬರಾಜು ಮಾಡಲಾಗುವ ನೀರಿನ ಟ್ಯಾಂಕ್, ತೊಟ್ಟಿ ಸ್ವಚ್ಚತೆಗೆ ಆದ್ಯತೆ ನೀಡಬೇಕು. ಜನ ಜಾನುವಾರುಗಳಿಗೆ ನೀರಿನ ಸಮಸ್ಯೆಯಾಗದಂತೆ ಅಧಿಕಾರಿಗಳು ಸಮನ್ವಯತೆ ಸಾಧಿಸಿ ಅಗತ್ಯ ಸಿದ್ದತೆ ಕೈಗೊಳ್ಳಬೇಕು.

ಮಳೆ ಕೊರತೆಯಿಂದ ಜಲಮೂಲ ಕುಸಿದಿದ್ದು, ಕ್ಲೋರೈಡ್ ಮತ್ತು ಫ್ಲೋರೈಡ್ ಅಂಶ ಹೆಚ್ಚಾಗಿ ಕಂಡು ಬರುತ್ತದೆ. ಇಂತಹ ನೀರನ್ನು ಸೇವನೆ ಮಾಡುವುದರಿಂದ ವಾಂತಿ, ಬೇದಿ ಕಾಲರಾದಂತಹ ಖಾಯಿಲೆಗಳಿಗೆ ತುತ್ತಾಗುವರು. ಈ ನಿಟ್ಟಿನಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಕಾಲಕಾಲಕ್ಕೆ ಎಫ್ಟಿಕೆ ಕಿಟ್ ಬಳಸಿ ನೀರನ್ನು ಪರೀಕ್ಷಿಸಿ ಕುಡಿಯಲು ಯೋಗ್ಯವೇ ಇಲ್ಲವೇ ಎಂಬುದನ್ನು ಖಚಿತಪಡಿಸಕೊಳ್ಳಬೇಕು. ಅದಷ್ಟೇ ಅಲ್ಲದೇ ಆನ್ಲೈನ್ನಲ್ಲಿ ನಮೂದಿಸಬೇಕು. ಆದ್ದರಿಂದ ಸಾರ್ವಜನಿಕರು ಕೊಳವೆ ಬಾವಿಗಳಲ್ಲಿನ ಸರಬರಾಜಾಗುವು ನೀರನ್ನು ಕಾಯಿಸಿ ಆರಿಸಿ ನಂತರ ಕುಡಿಯಬೇಕು. ಸಾಧ್ಯವಾದಲ್ಲಿ ಶುದ್ಧೀಕರಿಸಿದ ನೀರನ್ನೇ ಬಳಸಲು ತಿಳಿಸಿದರು. ಸಾರ್ವಜನಿಕರಿಗೆ ಈ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸಬೇಕು. ಗ್ರಾಮೀಣ ಭಾಗದಲ್ಲಿ ಜಾಗೃತಿ ಮೂಡಿಸಲು ನೀರು ಮತ್ತು ನೈರ್ಮಲ್ಯ ಯೋಜನೆಗಳ ವ್ಯಾಪಕ ಪ್ರಚಾರ ಕೈಗೊಳ್ಳುವಂತೆ ಮಾಹಿತಿ ಮತ್ತು ಪ್ರಚಾರ ಇಲಾಖೆಗೆ ಜವಾಬ್ದಾರಿ ವಹಿಸಲಾಯಿತು.

ಸಭೆಯಲ್ಲಿ ಜಿ.ಪಂ. ಉಪಕಾರ್ಯದರ್ಶಿ ಕೆ.ತಿಮ್ಮಪ್ಪ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಎಂಜಿನಿಯರ್ ಎಸ್.ದೀಪಾ, ಆರೋಗ್ಯ ಇಲಾಖೆಯ ಜಿಲ್ಲಾ ಆರೋಗ್ಯ ನಿರೀಕ್ಷಣಾಧಿಕಾರಿ ಎಂ.ಧರ್ಮನಗೌಡ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ಮೈಸೂರು ದಸರಾ ವಸ್ತುಪ್ರದರ್ಶನಕ್ಕೆ ಜಾಗತಿಕ ಸ್ಪರ್ಶ

**ಮೈಸೂರು, ಜು.18:–** ದಸರಾ ವಸ್ತು ಪ್ರದರ್ಶನವನ್ನು ಜಾಗತಿಕ ಮಟ್ಟದಲ್ಲಿ ಮತ್ತಷ್ಟು ಆಕರ್ಷಣೀಯವಾಗಿಸಲು ಕರ್ನಾಟಕ ಪ್ರದರ್ಶನ ಪ್ರಾಧಿಕಾರವು ವಸ್ತು ಪ್ರದರ್ಶನ ಆವರಣವನ್ನು ವರ್ಷಪೂರ್ತಿ ಕಾರ್ಯನಿರ್ವಹಿಸುವ ಅಮ್ಯೂಸ್ಮೆಂಟ್ ಪಾರ್ಕ್ ಮಾದರಿಯಲ್ಲಿ ಅಭಿವೃದ್ಧಿಪಡಿಸುವ ಯೋಜನೆ ಪ್ರಾಧಿಕಾರದ ಮುಂದಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ನಗರಾಭಿವೃದ್ಧಿ ಸಚಿವರಾದ ಡಾ ಯತೀಂದ್ರ ಸಿದ್ದರಾಮಯ್ಯ ಹೇಳಿದರು.



ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಸಭಾಂಗಣದಲ್ಲಿ 2026ರ ದಸರಾ ವಸ್ತು ಪ್ರದರ್ಶನ ಆಯೋಜನೆಯ ಕುರಿತು ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ಈ ಬಾರಿಯ ವಸ್ತು ಪ್ರದರ್ಶನವು ದಸರಾ ಹಬ್ಬದಿಂದ ಆರಂಭವಾಗಿ ಒಟ್ಟು 90 ದಿನಗಳ ಕಾಲ, ಅಂದರೆ ಜನವರಿ 8 2027 ರವರೆಗೆ ಸಾರ್ವಜನಿಕರಿಗೆ ಮುಕ್ತವಾಗಿರಲಿದ್ದು, ಸಾರ್ವಜನಿಕರ ಬೇಡಿಕೆಗೆ ಅನುಗುಣವಾಗಿ ಅವಧಿಯನ್ನು ಮತ್ತಷ್ಟು ವಿಸ್ತರಿಸುವ ಮುಕ್ತ ಅವಕಾಶವನ್ನು ಕಲ್ಪಿಸಲಾಗಿದೆ ಎಂದು ಹೇಳಿದರು.

ಕಳೆದ ವರ್ಷಗಳಲ್ಲಿ 8 ಮತ್ತು 9 ಲಕ್ಷದಷ್ಟಿದ್ದ ಪ್ರವಾಸಿಗರ ಸಂಖ್ಯೆಯು ಪ್ರಸ್ತುತ ಸಾಲಿನಲ್ಲಿ ಅಧಿಕಾರಿಗಳ ಉತ್ತಮ ನಿರ್ವಹಣೆಯಿಂದಾಗಿ ಬರೋಬ್ಬರಿ 15 ಲಕ್ಷದ ಗಡಿಯನ್ನು ದಾಟಿ ದಾಖಲೆ ಬರೆದಿದೆ. ಪ್ರವಾಸಿಗರ ಭೇಟಿಯನ್ನು ಮತ್ತಷ್ಟು ಸುಲಭ ಹಾಗೂ ಆರಾಮದಾಯಕವಾಗಿಸಲು 4 ಕೋಟಿ ರೂಪಾಯಿ ವೆಚ್ಚದಲ್ಲಿ 32 ಶಾಶ್ವತ ಮಳಿಗೆಗಳನ್ನು ಹಾಗೂ ಮಳೆ–ಬಿಸಿಲಿನಿಂದ ರಕ್ಷಣೆ ನೀಡುವ ಅತ್ಯಾಧುನಿಕ ಶೆಲ್ಟರ್ ಒಳಗೊಂಡ ಶಾಶ್ವತ ಫುಡ್ ಕೋರ್ಟ್ ವ್ಯವಸ್ಥೆಯನ್ನು ಆವರಣದಲ್ಲಿ ನಿರ್ಮಿಸಲಾಗುತ್ತಿದೆ ಎಂದರು.

ಪ್ರತಿ ವರ್ಷ ತಾತ್ಕಾಲಿಕ ಮಳಿಗೆಗಳನ್ನು ನಿರ್ಮಿಸುವ ವೆಚ್ಚವನ್ನು ತಪ್ಪಿಸಲು ಸಿದ್ದರಾಮಯ್ಯ ಪ್ರದರ್ಶನ ಅಂಗಳದಲ್ಲಿ ಈಗಾಗಲೇ ಕಾಯಂ ಮಳಿಗೆಗಳನ್ನು ಕಲ್ಪಿಸಲಾಗಿದೆ. ಇದರೊಂದಿಗೆ ಸಾರ್ವಜನಿಕರ ನೆಚ್ಚಿನ ಆಕರ್ಷಣೆಗಳಾದ ಸಂಗೀತ ಕಾರಂಜಿ ಹಾಗೂ ಲೇಸರ್ ಶೋ, ಬೋಟಿಂಗ್ ಮತ್ತು ಬೆಂಕಿ ಉಗುಳುವ ಡ್ರ್ಯಾಗನ್ ಪ್ರದರ್ಶನ ಒಳಗೊಂಡ ರಾಜೀವ್ ಗಾಂಧಿ ಡ್ರ್ಯಾಗನ್ ಪಾಂಡ್ ಮನರಂಜನಾ ಕಾರ್ಯಕ್ರಮಗಳನ್ನು ಈ ಬಾರಿಯೂ ಮುಂದುವರಿಸಲಾಗುತ್ತಿದ್ದು, ಮೈದಾನದ ಒಳಭಾಗದಲ್ಲಿ ರಸ್ತೆ ಮತ್ತು ಕುಡಿಯುವ ನೀರಿನಂತಹ ಮೂಲಸೌಕರ್ಯಗಳನ್ನು ಸಂಪೂರ್ಣವಾಗಿ ಮೇಲ್ದರ್ಜೆಗೇರಿಸಲಾಗಿದೆ ಎಂದು ಹೇಳಿದರು.

ಮೈಸೂರು ನಗರದ ಮಧ್ಯಭಾಗದಲ್ಲಿರುವ ಜಾಗಗಳಲ್ಲಿ ರ್ಯಾಲಿಗಳು, ಖಾಸಗಿ ಕಾರ್ಯಕ್ರಮಗಳು ಹಾಗೂ ಸಂಗೀತ ಕಚೇರಿಗಳನ್ನು ನಡೆಸುವುದರಿಂದ ಸಂಚಾರ ದಟ್ಟಣೆ ಹೆಚ್ಚಾಗುತ್ತಿದೆ. ಇದನ್ನು ತಪ್ಪಿಸಲು ನಗರದ ಹೊರವಲಯದಲ್ಲಿ ಇಂತಹ ಸಾರ್ವಜನಿಕ ಕಾರ್ಯಕ್ರಮಗಳಿಗಾಗಿ ಪ್ರತ್ಯೇಕ ಮೈದಾನವೊಂದನ್ನು ಮೀಸಲಿಡಲು ಸರ್ಕಾರಕ್ಕೆ ಮನವಿ ಮಾಡಲಾಗಿದೆ. ರಾಜ್ಯದಲ್ಲಿ ಬರಗಾಲದ ಪರಿಸ್ಥಿತಿ ಇರುವುದರಿಂದ ದಸರಾವನ್ನು ಸರಳವಾಗಿ ಆಚರಿಸಬೇಕೆಂಬ ಅಭಿಪ್ರಾಯಗಳು ಕೇಳಿಬಂದಿದ್ದವು. ಆದರೆ ದಸರಾ ಉನ್ನತ ಮಟ್ಟದ ಸಮಿತಿ ಸಭೆಯಲ್ಲಿ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಚರ್ಚೆಯ ಬಳಿಕ, ಪ್ರತಿವರ್ಷದಂತೆ ಈ ಬಾರಿಯೂ ದಸರಾವನ್ನು ಸಡಗರ ಮತ್ತು ವಿಜೃಂಭಣೆಯಿಂದಲೇ ಆಚರಿಸಲು ತೀರ್ಮಾನಿಸಲಾಗಿದೆ ಎಂದು ಹೇಳಿದರು.

ಕರಾವಳಿ ಭಾಗದ ಸಾಂಸ್ಕೃತಿಕ ಕ್ರೀಡೆಯಾದ ಕಂಬಳವನ್ನು ಕೇವಲ ಆ ಭಾಗಕ್ಕೆ ಸೀಮಿತಗೊಳಿಸದೆ, ಇಡೀ ರಾಜ್ಯದ ಜನರಿಗೆ ಪರಿಚಯಿಸುವ ಉದ್ದೇಶವಿದೆ. ಈ ನಿಟ್ಟಿನಲ್ಲಿ ಮೈಸೂರು ದಸರಾದಲ್ಲಿ ಕಂಬಳವನ್ನು ಆಯೋಜಿಸಲು ದಸರಾ ಉನ್ನತ ಮಟ್ಟದ ಸಮಿತಿ ಸಭೆಯಲ್ಲಿ ಬಹುತೇಕ ಶಾಸಕರು ಮತ್ತು ಸದಸ್ಯರು ಒಲವು ವ್ಯಕ್ತಪಡಿಸಿದ್ದಾರೆ. ಈ ಕುರಿತು ಮುಖ್ಯಮಂತ್ರಿಗಳು ಅಂತಿಮ ತೀರ್ಮಾನ ಕೈಗೊಳ್ಳಲಿದ್ದಾರೆ. ದಸರಾ ಆರಂಭವಾಗುವುದಕ್ಕಿಂತ ಮುಂಚಿತವಾಗಿಯೇ ಮೈಸೂರು ನಗರದ ರಸ್ತೆಗಳ ರಿಪೇರಿ ಹಾಗೂ ಹೊಸ ರಸ್ತೆ ನಿರ್ಮಾಣ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಸಂಬಂಧಪಟ್ಟ ಎಂಜಿನಿಯರ್ಗಳಿಗೆ ಸೂಚನೆ ನೀಡಲಾಗಿದೆ ಎಂದರು.

ಕಳೆದ ಬಾರಿಯಂತೆ ಈ ಬಾರಿಯೂ ದಸರಾ ವಸ್ತುಪ್ರದರ್ಶನಕ್ಕೆ ವಿಶೇಷ ಅನುದಾನ ನೀಡುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗುವುದು. ವಸ್ತುಪ್ರದರ್ಶನವು ಪ್ರಮುಖ ಆಕರ್ಷಣೆಯಾಗಿದ್ದು, ಲಕ್ಷಾಂತರ ಜನ ಭೇಟಿ ನೀಡುವುದರಿಂದ ಅದರ ಅಭಿವೃದ್ಧಿಗೆ ಅನುದಾನದ ಅಗತ್ಯವಿದೆ. ದಸರಾ ಶಾಶ್ವತ ಪ್ರಾಧಿಕಾರ ರಚನೆ ಮಾಡಬೇಕೆಂಬ ಬೇಡಿಕೆ ಪ್ರತಿ ವರ್ಷದಂತೆ ಈ ಬಾರಿಯೂ ಬಂದಿದ್ದು, ಮುಖ್ಯಮಂತ್ರಿಗಳು ಇದನ್ನು ಪರಿಶೀಲಿಸಿ ಸೂಕ್ತ ತೀರ್ಮಾನ ಕೈಗೊಳ್ಳಲಿದ್ದಾರೆ. ಉಸ್ತುವಾರಿ ಸಚಿವರಾಗಿ ಅಧಿಕಾರ ವಹಿಸಿಕೊಂಡು ಕೇವಲ ಒಂದು ತಿಂಗಳಷ್ಟೇ ಆಗಿರುವುದರಿಂದ, ಮುಂದಿನ ತಿಂಗಳು ಕಡ್ಡಾಯವಾಗಿ ಕೆ.ಡಿ.ಪಿ ಸಭೆಯನ್ನು ಕರೆಯುವುದು ಎಂದು ತಿಳಿಸಿದರು.

ದಸರಾ ಸಂದರ್ಭದಲ್ಲಿ ಉಪಸಮಿತಿಗಳನ್ನು ರಚಿಸುವಾಗ ಪಕ್ಷದ ಕಾರ್ಯಕರ್ತರನ್ನು ಸೇರಿಸುವ ವಿಷಯದಲ್ಲಿ ಉಂಟಾಗುವ ಗೊಂದಲಗಳನ್ನು ಈ ಬಾರಿ ನಿವಾರಿಸಲಾಗುವುದು. ಆದಷ್ಟು ಬೇಗ ಸಮಿತಿಗಳನ್ನು ರಚಿಸಿ ನಿಯಮಿತ ಸಂಖ್ಯೆಯಲ್ಲಿ ಕಾರ್ಯಕರ್ತರನ್ನು ಸದಸ್ಯರನ್ನಾಗಿ ನೇಮಕ ಮಾಡಲು ಕ್ರಮ ಕೈಗೊಳ್ಳಲಾಗುವುದು. ಹಿಂದಿನ ಎಲ್ಲಾ ಸರ್ಕಾರಗಳೂ ತಮ್ಮ ಪಕ್ಷದ ಕಾರ್ಯಕರ್ತರಿಗೆ ಇಂತಹ ಮಂಡಳಿ ಹಾಗೂ ಸಮಿತಿಗಳಲ್ಲಿ ಅವಕಾಶ ನೀಡುವುದು ಸಹಜ ಪ್ರಕ್ರಿಯೆಯಾಗಿದ್ದು, ಈ ಬಾರಿಯೂ ಅದನ್ನೇ ಪಾಲಿಸಲಾಗುವುದು ಎಂದು ತಿಳಿಸಿದರು.

ಬೆಂಗಳೂರು ಮಹಾನಗರ ಪಾಲಿಕೆ ಚುನಾವಣೆಗಳನ್ನು ಈ ವರ್ಷದ ನವೆಂಬರ್ನಲ್ಲಿ ನಡೆಸಲಾಗುವುದು, ಹಾಗೆಯೇ ಗ್ರಾಮ ಪಂಚಾಯಿತಿ ಚುನಾವಣೆಗಳನ್ನೂ ಇದೇ ವರ್ಷ ನಡೆಸಲು ಗ್ರಾಮೀಣಾಭಿವೃದ್ಧಿ ಸಚಿವರು ಒಲವು ತೋರಿದ್ದಾರೆ. ಮೈಸೂರು ಮಹಾನಗರ ಪಾಲಿಕೆ ಚುನಾವಣೆ ವಿಳಂಬಕ್ಕೆ ಕಾರಣ ಮೈಸೂರನ್ನು ಬೃಹತ್ ಮೈಸೂರು ಮಾಡಲು ಪ್ರಸ್ತಾವನೆ ಸಲ್ಲಿಸಲಾಗಿದೆ. ಆದರೆ ಸೆನ್ಸಸ್ ಪ್ರಕ್ರಿಯೆ ಚಾಲ್ತಿಯಲ್ಲಿರುವುದರಿಂದ ಯಾವುದೇ ಬದಲಾವಣೆ ಮಾಡಲು ಬರುವುದಿಲ್ಲ ಎಂದು ರಾಜ್ಯಪಾಲರು ತಿಳಿಸಿದ್ದರಿಂದ ಚುನಾವಣೆ ವಿಳಂಬವಾಗಿದೆ. ಈಗ ಸೆನ್ಸಸ್ ಮುಗಿಯುವವರೆಗೆ ಕಾಯುವುದು ಬೇಡ ಎಂದು ತೀರ್ಮಾನಿಸಿದ್ದು, ಶೀಘ್ರದಲ್ಲೇ ಸಿಎಂ ಹಾಗೂ ಪಕ್ಷದ ನಾಯಕರೊಂದಿಗೆ ಚರ್ಚಿಸಿ ಚುನಾವಣೆ ನಡೆಸಲಾಗುವುದು ಎಂದರು.

ಬೆಂಗಳೂರಿನಲ್ಲಿ ಫುಟ್ಪಾತ್ ಅತಿಕ್ರಮಣ ತೆರವುಗೊಳಿಸುವುದು ಸಂಚಾರ ದಟ್ಟಣೆ ನಿಯಂತ್ರಿಸಲು ಅನಿವಾರ್ಯವಾಗಿದೆ. ಆದರೆ ಇತರೆ ನಗರಗಳಲ್ಲಿ ಮಾನವೀಯತೆಯ ದೃಷ್ಟಿಯಿಂದ ಬೀದಿ ಬದಿ ವ್ಯಾಪಾರಿಗಳಿಗೆ ತೊಂದರೆಯಾಗದಂತೆ ನೋಟಿಸ್ ನೀಡಿ, ಪರ್ಯಾಯ ಜಾಗ ಕಲ್ಪಿಸಿ ನಂತರ ತೆರವು ಮಾಡಲಾಗುವುದು. ಮೈಸೂರಿನಲ್ಲಿ ಫುಡ್ ಸ್ಟ್ರೀಟ್ ಮತ್ತು ಪ್ರತ್ಯೇಕ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಲು ಸೂಚಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷರಾದ ಅಯೂಬ್ ಖಾನ್ ಮತ್ತು ವಿಜಯ ಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

# ಹಾಲಸ್ವಾಮಿ ಮಠ ಭವನ ನಿರ್ಮಾಣಕ್ಕೆ ಶಾಸಕರಿಂದ ಭೂಮಿ ಪೂಜೆ



**ಹಗರಿಬೊಮ್ಮನಹಳ್ಳಿ. ಜು.18** ಪಟ್ಟಣದ ಹಾಲಸ್ವಾಮಿ ಮಠದಲ್ಲಿ ಶುಕ್ರವಾರ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಶಾಸಕ ಕೆ ನೇಮಿರಾಜ್ ನಾಯ್ಕ ಪೂಜೆ ಸಲ್ಲಿಸಿದರು.

ನಂತರ ಮಾತನಾಡಿ ಭವನ ನಿರ್ಮಾಣಕ್ಕೆ 25 ಲಕ್ಷ ರೂ. ಅನುದಾನ ನೀಡಲಾಗಿದೆ. ಸರ್ಕಾರ ಮಾಡದ ಕೆಲಸಗಳನ್ನು ಮಠಗಳು ಮಾಡುತ್ತಿವೆ. ಆದ್ದರಿಂದ ಮಠಗಳು ಅಭಿವೃದ್ಧಿ ಹೊಂದಬೇಕು. ಮಠಗಳಲ್ಲಿ ಸಂಸ್ಕಾರ, ಸಂಸ್ಕೃತಿ ಕಲಿಸಲಾಗುತ್ತದೆ. ಕೆಲ ಮಠಗಳಲ್ಲಿ ಉಚಿತ ವಿವಾಹ ನಡೆಯುತ್ತಿವೆ. ಇದರಿಂದ ಪಾಲಕರ ಹೊರೆ ಕಡಿಮೆಯಾಗುತ್ತಿದೆ ಎಂದರು.

ನಂದಿಪುರ ಮಠದ ಡಾ.ಮಹೇಶ್ವರ ಸ್ವಾಮೀಜಿ ಮಾತನಾಡಿ, ಮಠಗಳಿಗೆ ಯಾವುದೇ ಆದಾಯ ಇರುವುದಿಲ್ಲ. ಭಕ್ತರು ನೀಡುವ ಕಾಣಿಕೆಗಳಿಂದ ಮಠಗಳ ನಿರ್ವಹಣೆ ಮತ್ತು ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುವುದರೊಂದಿಗೆ ಅನ್ನ ದಾಸೋಹ ಮಾಡಲಾಗುತ್ತದೆ ಎಂದು ತಿಳಿಸಿದರು.

ಹಾಲಸ್ವಾಮಿ ಮಠದ ಹಾಲಸಿದ್ದೇಶ್ವರ ಸ್ವಾಮೀಜಿ, ಅಡವಿಹಳ್ಳಿ ವೀರಗಂಗಾಧ ವೀರಗಂಗಾಧರ ಸ್ವಾಮೀಜಿ, ಮುದುಕಯ್ಯ ಸ್ವಾಮಿ, ಉಲವತ್ತಿ ವಿಎಸ್‌ಎಸ್ ಎನ್ ಅಧ್ಯಕ್ಷ ಕನ್ನಿಹಳ್ಳಿ ಚಂದ್ರಶೇಖರ, ಪುರಸಭೆ ಸದಸ್ಯರಾದ ದೀಪಕ್ ಸಾ ಕಠಾರೆ, ನೆಲ್ಲು ಇಸ್ಮಾಯಿಲ್, ಪಿಎಲ್ಡಿ ಬ್ಯಾಂಕ್ ಮಾಜಿ ನಿರ್ದೇಶಕ ಕೃಷ್ಣಮೂರ್ತಿ, ಜೆಡಿಎಸ್ ಜಿಲ್ಲಾ ಉಪಾಧ್ಯಕ್ಷ ಕೃಷ್ಣಮೂರ್ತಿ ಶೆಟ್ರು, ಪ್ರಮುಖರಾದ ಚಿತ್ತವಾಡಿಗಿ ಪ್ರಕಾಶ, ಕುಮಾರ್ ಇಂಜಿನಿಯರ್, ಬಣಕಾರ ಕೊಟ್ರೇಶ, ಹೋಟೆಲ್ ಸಿದ್ದರಾಜು, ಪಟ್ಟೆದ್ ಮಲ್ಲಣ್ಣ,ದೇವಿ ಪ್ರಸಾದ್,ಬ್ಯಾಟಿ, ಶ್ರೀಶೈಲ, ಬಿಜಿ ಬಡಿಗೇರ್, ನಾಗರಾಜ,ಶ್ರೀದುರುಗಮ್ಮ ದೇವಿ ದೇವಸ್ಥಾನದ ಹನುಮಂತಪ್ಪ ಇತರರಿದ್ದರು.

# ಹೊಸಪೇಟೆಯಲ್ಲಿ ಜನಸಂಖ್ಯಾ ದಿನಾಚರಣೆ

**ಹೊಸಪೇಟೆ, ಜು.18:** ವಿಜಯನಗರ ಜಿಲ್ಲೆಯ ಜಿಲ್ಲಾಡಳಿತ ಜಿಲ್ಲಾ ಪಂಚಾಯತ ಹಾಗೂ ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಇಂದು ವಿಶ್ವ ಜನಸಂಖ್ಯೆ ದಿನಾಚರಣೆ ಜನಜಾಗೃತಿ ಮುಖಾಂತರ ಆಚರಿಸಲಾಯ್ತು.

ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ. ಡಾ.ಲಿಂಗರಾಜು ಜಾಥಕ್ಕೆ ಚಾಲನೆ ನೀಡಿದರು. ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ. ಡಾ.ವಿನಯ್ ಎಂ.ಮತ್ತು ಕಾರ್ಯ ಕ್ರಮ ಅಧಿಕಾರಿಗ. ಡಾ ಜಂಬಯ್ಯ.ಡಾ.ಸತೀಶ್. ಡಾ.ಭಾಸ್ಕರ. ಡಾ.ರಾಧಿಕಾ.ತಾಲ್ಲೂಕು ಅಧಿಕಾರಿಗಳಾದ. ಡಾ.ವಿನೋದ್.ಡಾ.ಬಸವರಾಜ.ಸಿ.ಮತ್ತು ನಗರ ಪ್ರಾ.ಕೇಂದ್ರದ ಎಲ್ಲಾ ವೈದ್ಯಾಧಿಕಾರಿಗಳು.ಉಪ ಜಿಲ್ಲಾ ಅರೋಗ್ಯ ಶಿಕ್ಷಣಾಧಿಕಾರಿ ಎಂ.ಪಿ.ದೊಡಮನಿ. ಮತ್ತು ಅರೋಗ್ಯ ನಿರೀಕ್ಷಣಾಧಿಕಾರಿಗಳು.ಮತ್ತು ಪ್ರಾಥಮಿಕ ಅರೋಗ್ಯ ಸುರಕ್ಷಣಾಧಿಕಾರಿಗಳು ಇಲಾಖೆಯ ಸಿಬ್ಬಂದಿಗಳು ಮತ್ತು ಅಧಿಕಾರಿಗಳು ನರ್ಸಿಂಗ್ ಕಾಲೇಜು ವಿಧ್ಯಾರ್ಥಿಗಳು ಮತ್ತು ಅಶಾ ಕಾರ್ಯಕರ್ತರು ಜಾಥದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಿದರು.




Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE